ಸಂಪುಟ: ೦೬/ ಸಂಚಿಕೆ: ೨೬೭/ಶನಿವಾರ ದಿನಾಂಕ : ೨೧-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 267/ SATURDAY Date : 21-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

ಸಿ.ಟಿ.ರವಿ ವಿರುದ್ಧ ಇಂದು ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನೆ

ಬೆಳಗಾವಿ : ವಿಧಾನ ಪರಿಷತ್ತಿನಲ್ಲಿ ಗುರುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ವಿರುದ್ಧ ಅವಹೇಳನಕಾರಿ ಮಾತುಗಳನ್ನು ಆಡಿದ ಹಿನ್ನೆಲೆಯಲ್ಲಿ ಕೂಡಲೇ ಅವರ ಸದಸ್ಯತ್ವ ಅಮಾನತು ಮಾಡಬೇಕು ಎಂದು ಆಗ್ರಹಿಸಿ ಶನಿವಾರ ಬೆಳಗಾವಿಯಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಅಭಿಮಾನಿಗಳು ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ.

ಎಪಿಎಂಸಿ ಮಾಜಿ ಅಧ್ಯಕ್ಷ ಯುವರಾಜ ಕದಂ ನೇತೃತ್ವದಲ್ಲಿ ಶುಕ್ರವಾರ ಸಭೆ ನಡೆಸಿದ ವಿವಿಧ ಸಂಘಟನೆಗಳ ಮುಖಂಡರು ಶನಿವಾರ ಪ್ರತಿಭಟನೆ ಆಯೋಜಿಸಲು ನಿರ್ಧರಿಸಿದ್ದಾರೆ.

ಶನಿವಾರ ಬೆಳಗ್ಗೆ 11 ಗಂಟೆಗೆ ಸಿಪಿಎಡ್ ಮೈದಾನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನೆ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಆಯೋಜಕರು ಕೋರಿದ್ದಾರೆ.

ಟ್ರಾಫಿಕ್ ಸಮಸ್ಯೆ ನಿಯಂತ್ರಿಸಿ ಪುರಸಭೆ ಅಧ್ಯಕ್ಷ ವಿಜಯ ಬೋಳನ್ನವರ

ಬೈಲಹೊಂಗಲ–ದಿನದಿಂದ ದಿನಕ್ಕೆ ಬೈಲಹೊಂಗಲ ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದ್ದು ನಿಯಂತ್ರಿಸಿ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಪುರಸಭೆ ಅಧ್ಯಕ್ಷ ವಿಜಯ ಬೋಳನ್ನವರ ಪೊಲೀಸ್ ವೃತ್ತ ನಿರೀಕ್ಷಿಕರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ದಿನದಿಂದ ದಿನಕ್ಕೆ ಬೈಲಹೊಂಗಲ ಪಟ್ಟಣವು ಬೆಳೆಯುವುದರ ಜೊತೆಗೆ ಜನದಟ್ಟನೆ ಹಾಗೂ ಟ್ರಾಫಿಕ್ ಸಮಸ್ಯೆಗೂ ಪ್ರಮುಖ ಕಾರಣವಾಗಿದೆ. ಸರಕು ಸಾಗಾಣಿಕೆ,ವ್ಯಾಪಾರ ಸೇರಿದಂತೆ ಇನ್ನಿತರೇ ಅವಶ್ಯಕತೆಗಾಗಿ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಬೈಲಹೊಂಗಲ ಪಟ್ಟಣವನ್ನೇ ಅವಲಂಬಿಸಿರುವುದರಿಂದ ವಾಹನಗಳ ಸಂಚಾರ ಹೆಚ್ಚಾಗಿ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ.

ಪಟ್ಟಣದ ಪ್ರಮುಖ ರಸ್ತೆಗಳಾದ ಚನ್ನಮ್ಮಾಜಿ ವೃತ್ತ, ಇಂಚಲ ಕ್ರಾಸ್, ಬಸ್ ನಿಲ್ದಾಣದ ಸುತ್ತಮುತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಬಜಾರ್ ರಸ್ತೆಗಳಲ್ಲಿ ಮಿತಿಮೀರಿದ ಟ್ರಾಫಿಕ್ ಸಮಸ್ಯೆಯಿಂದಾಗಿ ಅಪಘಾತಗಳು ಕೂಡ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಆಯಾ ಸ್ಥಳಗಳಲ್ಲಿ ಟ್ರಾಫಿಕ್ ಪೊಲೀಸರನ್ನು ನಿಯೋಜಿಸಿ ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಟ್ಟು ಭಾರಿ ವಾಹನಗಳಿಂದ ಆಗುವ ಅನಾಹುತ ತಪ್ಪಿಸುವಂತೆ ತಿಳಿಸಿದರು.

2 ದಿವಸದ ಗಂಡು ಮಗು ನಾಪತ್ತೆ

ಬೆಳಗಾವಿ ಡಿ.20 : ಹುಬ್ಬಳ್ಳಿ ಜಿಲ್ಲೆಯ ಐಶ್ವರ್ಯ ಗಣೇಶ ತಪಸ್ಕಾರ ಅವರು ಡಿ.21 ರಂದು ನಗರದ ಕೆ.ಎಲ್.ಇ ಆಸ್ಪತ್ರೆಯಲ್ಲಿ ಹೆರಿಗೆಗೆ ದಾಖಲಾಗಿ ಡಿ.22 ರಂದು ಗಂಡು ಮಗುವಿಗೆ ಜನ್ಮ ನೀಡಿದ್ದು. ಯಾರೋ ಮಧ್ಯ ವಯಸ್ಕಿನ ಹೆಂಗಸು ಪಿರ್ಯಾದರರ ಎರಡು ದಿವಸದ ಗಂಡು ಮಗುವಿಗೆ ಬಿ.ಜಿ.ಜಿ ಹಾಕಿಸಿಕೊಂಡು ಬರುತ್ತೆನೆ ಅಂತಾ ಹೇಳಿ ಮಗುವನ್ನು ಅಪಹರಿಸಿಕೊಂಡು ಹೋಗಿರುತ್ತಾಳೆ ಎಂದು ಪ್ರಕರಣ ದಾಖಲಾಗಿದೆ ಎಂದು ಬೆಳಗಾವಿ ಎಪಿಎಂಸಿ ಪೊಲೀಸ್ ಠಾಣೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

87ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಖ್ಯಮಂತ್ರಿ ಚಾಲನೆ

ಮಂಡ್ಯ: ಸಕ್ಕರೆ ನಗರಿ ಮಂಡ್ಯದಲ್ಲಿ ಮೂರು ದಿನಗಳ ಕಾಲ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಕರ್ನಾಟಕದಲ್ಲಿ ಅತಿ ಹೆಚ್ಚು ಕನ್ನಡ ಮಾತನಾಡುವ ಜಿಲ್ಲೆಯೆಂದು ಹೆಸರು ಪಡೆದಿರುವ ಹಾಗೂ ಸಕ್ಕರೆ ನಗರಿ ಎಂದೇ ಪ್ರಸಿದ್ಧವಾಗಿರುವ ಮಂಡ್ಯದಲ್ಲಿ ಆಯೋಜಿಸಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಸಿಎಂ ಅತ್ಯಂತ ಅಭಿಮಾನ ಹಾಗೂ ಸಂತೋಷದಿಂದ ಉದ್ಘಾಟಿಸಿದರು.

ಆದಿ ಚುಂಚನಗಿರಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಸಮ್ಮೇಳನಾಧ್ಯಕ್ಷ ನಾಡೋಜ ಡಾ.ಗೊ.ರು. ಚನ್ನಬಸಪ್ಪ, ಹಿರಿಯ ಸಾಹಿತಿಗಳಾದ ಡಾ.ದೊಡ್ಡರಂಗೇಗೌಡ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ.ಚಂದ್ರಶೇಖರ ಕಂಬಾರ ವೇದಿಕೆ ಮೇಲಿದ್ದರು.

ಈ ಸಂದರ್ಭದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ, ಸಮಾಜ

ಕಲ್ಯಾಣ ಇಲಾಖೆ ಸಚಿವ ಡಾ.ಹೆ.ಚ್.ಸಿ.ಮಹದೇವಪ್ಪ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಮುನಿಯಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ, ಕರ್ನಾಟಕ ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಶಾಸಕರಾದ ಪಿ.ಎಂ.ನರೇಂದ್ರ ಸ್ವಾಮಿ, ಪಿ.ರವಿಕುಮಾರ್, ಎಂ.ಬಿ. ರಮೇಶ್ ಬಂಡಿ ಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಕೆ.ಎಂ.ಉದಯ ಹಾಗೂ ಗಣ್ಯರು ಉಪಸ್ಥಿತರಿದ್ದರು. ಅಕ್ಷರ ಜಾತ್ರೆಗೆ ಹರಿದು ಬಂದ ಜನಸಾಗರ: ಸಕ್ಕರೆ ನಗರಿ ಮಂಡ್ಯದಲ್ಲಿ ನಡೆಯುತ್ತಿರುವ ಸಾಹಿತ್ಯ ಸಮ್ಮೇಳನಕ್ಕೆ ನಿರೀಕ್ಷೆಗೂ ಮೀರಿ ಜನಸಾಗರ ಹರಿದು ಬರುತ್ತಿದೆ. ಬೆಳಗ್ಗೆ 8 ಗಂಟೆಯಿಂದಲೇ ಸ್ಥಳೀಯ ನಾಗರಿಕರು, ಮಹಿಳೆಯರು, ವಿದ್ಯಾರ್ಥಿಗಳು ಸಾಹಿತ್ಯ ಸಮ್ಮೇಳನವನ್ನು ಕಣ್ತುಂಬಿಕೊಳ್ಳಲು ತಂಡೋಪತಂಡವಾಗಿ ಆಗಮಿಸುತ್ತಿದ್ದಾರೆ. ರಾಜ್ಯದ ನಾನಾ ಜಿಲ್ಲೆಗಳಿಂದ ಕನ್ನಡಾಭಿಮಾನಿಗಳು, ಸಾಹಿತಿಗಳು, ಸಾಹಿತ್ಯಾಸಕ್ತರು ಗುರುವಾರವೇ ನಗರಕ್ಕೆ ಆಗಮಿಸಿದ್ದಾರೆ. ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸಿದ ಪ್ರತಿನಿಧಿಗಳಿಗೆ ಜಿಲ್ಲಾಡಳಿತ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದ್ದು, ಸಮ್ಮೇಳನದ ಬಗ್ಗೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು. ಮೆರವಣಿಗೆ ಹಾಗೂ ಮುಖ್ಯವೇದಿಕೆಯಲ್ಲಿ ಜನಸಾಗರ ಜಮಾಯಿಸುವ ಕಾರಣ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲಾ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ಕೈಗೊಂಡಿದೆ. ಒಟ್ಟು 3,200 ಪೊಲೀಸ್ ಸಿಬ್ಬಂದಿಯನ್ನು ಸಾಹಿತ್ಯ ಸಮ್ಮೇಳನಕ್ಕೆ ನಿಯೋಜಿಸಲಾಗಿದೆ. ಮಂಡ್ಯ ನಗರದಲ್ಲಿ ನಗರ ಸಾರಿಗೆ ಬಸ್ ಉಚಿತವಾಗಿ ಬಿಟ್ಟಿರುವುದರಿಂದ ನಗರದ ಜನತೆಯೂ ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸುತ್ತಿದ್ದಾರೆ. ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಿದ ಹಿನ್ನೆಲೆಯಲ್ಲಿ ನಗರ ಸೇರಿದಂತೆ ಜಿಲ್ಲೆಯ ಬಹುತೇಕ ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ಉದ್ಘಾಟನೆಗೂ ಮುನ್ನ ಅತಿಥಿಗಳು ಅದ್ಧೂರಿ ಸಾಂಸ್ಕೃತಿಕ ಮೆರವಣಿಗೆ ಮೂಲಕ ವೇದಿಕೆಗೆ ಆಗಮಿಸಿದರು.

ತೇರದಾಳದಲ್ಲಿ ಸಿದ್ಧೇಶ್ವರ ಉತ್ಸವ

ಬದುಕಿಗೆ ಬಣ್ಣ ನೀಡುವವರು ಶಿಕ್ಷಕರು-ಆನಂದ ಶ್ರೀ

ತೇರದಾಳ–ದೇಶದಲ್ಲಿ ಸದೃಢವಾದ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಬಹಳಷ್ಟು ಮಹತ್ವದ್ದಾಗಿದೆ. ಒಬ್ಬ ವ್ಯಕ್ತಿಯ ಬದುಕು ಸುಂದರವಾಗಬೇಕಾದರೆ ಶಿಕ್ಷಕರು ಬಣ್ಣ ಹಚ್ಚಿದಾಗ ಮಾತ್ರ ಸುಂದರಗೊಳ್ಳುತ್ತದೆ ಎಂದು ಜಮಖಂಡಿ ಓಲೇಮಠದ ಆನಂದ ಶ್ರೀ ಹೇಳಿದರು. ಇಲ್ಲಿನ ಸಿದ್ಧೇಶ್ವರ ವಿದ್ಯಾವರ್ಧಕ ಸಂಘದ ಸರ್.ಎಂ. ವಿಶ್ವೇಶ್ವರಯ್ಯ ಪಿಯು ವಿಜ್ಞಾನ ಕಾಲೇಜ್ ಹಾಗೂ ಸ್ವಾಮಿ ವಿವೇಕಾನಂದ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್‌ನಲ್ಲಿ ಹಮ್ಮಿಕೊಂಡಿದ್ದ ಸಿದ್ಧೇಶ್ವರ ಉತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ ನೀಡುವುದು ಬಹಳಷ್ಟು ಅವಶ್ಯಕ ಇದೆ. ಆ ನಿಟ್ಟಿನಲ್ಲಿ ಸಂಸ್ಥೆಯವರು ವಿದ್ಯಾರ್ಥಿಗಳಲ್ಲಿ ತುಂಬಿರುವ ಸಂಸ್ಕಾರ ಶ್ಲಾಘನೀಯ ಎಂದು ಹೇಳಿದರು. ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಬನಹಟ್ಟಿ ಎಸ್‌ಟಿಸಿ ಕಾಲೇಜಿನ ವಿಶ್ರಾಂತ ಉಪನ್ಯಾಸಕ ಡಾ. ಸಂಗಮೇಶ ಮಟೋಳಿ, ಜಾಗತಿಕ ಮಟ್ಟದಲ್ಲಿ ಇಂದು ಶಿಕ್ಷಣ ತನ್ನದೆಯಾದ ಸದ್ದು ಮಾಡುತ್ತಿದೆ. ಶಿಕ್ಷಣ ಬದುಕಿನ ಸಂಜೀವಿನಿಯಾಗಿದೆ. ಪಾಲಕರು ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ನೀಡುವುದರ ಜತೆಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕೆಂದು ಹೇಳಿದರು. ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ ಮಾತನಾಡಿದರು. ಸಿಬಿಎಸ್‌ಇ ಚೇರಮನ್ ಶಂಕರ ಮಂಗಸೂಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆ ಅಧ್ಯಕ್ಷ ಡಾ. ಶಂಕರ ಅಥಣಿ ಅಧ್ಯಕ್ಷತೆ ವಹಿಸಿದ್ದರು. ಚೇರಮನ್ ಮಹೇಶ ಯಾದವಾಡ, ಪ್ರವೀಣ ನಾಡಗೌಡ, ಸಿಆರ್‌ಸಿ ಅನಂತ ಮುಧೋಳ, ರಮೇಶ ಅವರಾದಿ, ಮಲ್ಲಪ್ಪ ಮುಕರಿ, ರವಿ ಅವರಾದಿ, ಬಸವರಾಜ ಬಾಳಿಕಾಯಿ, ಶಿವಾನಂದ ನಿವರಗಿ, ಪರಪ್ಪ ಕಾಲತಿಪ್ಪಿ, ಪರಪ್ಪ ಅಥಣಿ, ಆಡಳಿತಾಧಿಕಾರಿ ಎಂ.ಬಿ. ಮಾಳೇದ, ಪ್ರಾಚಾರ್ಯ ಜಾಯ್ ಸಿಬಸ್ಟ್ಯನ್ ಇದ್ದರು.

ಬಿಜೆಪಿ ಎಂಎಲ್ಸಿ ಮಾತುಗಳಿಂದ ನೊಂದಿರುವೆ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ : ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಅಂಬೇಡ್ಕರ್ ಅವರ ಕುರಿತು ಆಡಿದ ಮಾತಿನ ಹಿನ್ನೆಲೆಯಲ್ಲಿ ವಿಧಾನ ಪರಿಷತ್‌ನಲ್ಲಿ ಪ್ರತಿಭಟನೆ ನಡೆಯುತ್ತಿದ್ದ ಸಂದರ್ಭದಲ್ಲಿ ಸಿ.ಟಿ.ರವಿ ಅವರು ನಮ್ಮ ನಾಯಕ ರಾಹುಲ್ ಗಾಂಧಿ ಅವರನ್ನು ಪದೇ ಪದೇ ಅವಹೇಳನಕಾರಿಯಾಗಿ ನಿಂದಿಸುತ್ತಿದ್ದ ಕಾರಣ ನಾನು ಮಾತನಾಡಿದ್ದು ನಿಜ, ನನ್ನ ಮಾತಿನಿಂದ ನಾನು ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಆದರೆ ಅವರು ನನ್ನ ಬಗ್ಗೆ ಹೇಳಿದ ಮಾತಿನ ಕುರಿತು ಸುಳ್ಳು ಹೇಳುತ್ತಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಗುರುವಾರ ವಿಧಾನ ಪರಿಷತ್ ನಲ್ಲಿ ನಡೆದ ಘಟನೆಯನ್ನು ವಿವರಿಸುತ್ತಾ ಭಾವುಕರಾದರು. ನಮ್ಮ ನಾಯಕರ ಕುರಿತು ಮಾತನಾಡಿದಾಗ ನಾನು ಸುಮ್ಮನೆ ಕುಳಿತುಕೊಳ್ಳಲು ಹೇಗೆ ಸಾಧ್ಯ.ರಾಹುಲ್ ಗಾಂಧಿ ಅವರು ಡ್ರಗ್ ಎಡಿಕ್ಟ್ ಎಂದು ಪದೆ ಪದೇ ಹೇಳಿದಾಗ ನೀವು ಅಪಘಾತ ಮಾಡಿ, ಮೂವರನ್ನು ಕೊಲೆ ಮಾಡಿದ್ದೀರಲ್ಲ ಎಂದು ಹೇಳಿದ್ದು ನಿಜ. ನನ್ನ ಮಾತಿನಿಂದ ನಾನು ಹಿಂದೆ ಸರಿದಿಲ್ಲ. ಆದರೆ ಅವರು ತಾವು ಆ ರೀತಿ ಮಾತನಾಡಿಯೇ ಇಲ್ಲ ಎಂದು ಸುಳ್ಳು ಹೇಳುತ್ತಿದ್ದಾರೆ ಅವರು ಮಾತನಾಡಿರುವ ಬಗ್ಗೆ ಎಲ್ಲರ ಬಳಿಯೂ ವಿಡಿಯೋ ದಾಖಲೆಯಿದೆ ಎಂದರು.

10 ಬಾರಿ ಅತ್ಯಂತ ಕೆಟ್ಟ ಪದ ಬಳಸಿ ನನ್ನ ತೇಜೋವಧೆ ಮಾಡಿದರು. ನಾನು ಯಾವುದಕ್ಕೂ ಹೆದರುವುದಿಲ್ಲ. ನನ್ನನ್ನು ನೋಡಿ ಎಷ್ಟೋ ಮಹಿಳೆಯರು ರಾಜಕಾರಣಕ್ಕೆ ಬರಲು ಸ್ಫೂರ್ತಿ ಪಡೆದಿದ್ದಾರೆ. ಆದರೆ ಇಂಥ ಪದಗಳನ್ನು ಸಹಿಸಲು ಹೇಗೆ ಸಾಧ್ಯ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದರು.

ರಾಜಕಾರಣದಲ್ಲಿ ದ್ವೇಷ ಭಾಷಣಗಳು ಸಾಮಾನ್ಯ. ಆದರೆ, ಇದುವರೆಗೂ ಇಂಥ ನೀಚ ರಾಜಕಾರಣ ನೋಡಿಲ್ಲ. ವಿಧಾನ ಪರಿಷತ್ ಅಂದರೆ ಬುದ್ಧಿವಂತರ ಛಾವಡಿ ಅಂತಾರೆ. ಆದರೆ ಅಲ್ಲಿ ಆಗಿದ್ದೇನು?.

ಈ ಘಟನೆಯಿಂದ ನಾನು ತುಂಬಾ ಶಾಕ್ ನಲ್ಲಿದ್ದೇನೆ. ಸುದ್ದಿ ತಿಳಿದ ತಕ್ಷಣ ನನ್ನ ಕುಟುಂಬದ ಸದಸ್ಯರು, ಕ್ಷೇತ್ರದ ಜನರು ಫೋನ್ ಮಾಡಿ ಧೈರ್ಯ ತುಂಬಿದರು ಎನ್ನುತ್ತ ಗದ್ಗರಿತರಾದರು.

****

ಸಿ.ಟಿ.ರವಿ ಬಂಧನ ಖಂಡಿಸಿ, ಬಿಜೆಪಿ ಪ್ರತಿಭಟನೆ

ಬೆಳಗಾವಿ: ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರ ಬಂಧನ ಖಂಡಿಸಿ ಬೆಳಗಾವಿ ನಗರದ ಚನ್ನಮ್ಮ ವೃತ್ತದಲ್ಲಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಕಾಂಗ್ರೆಸ್ ಸರ್ಕಾರ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಚನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ರಸ್ತೆ ತಡೆದು, ಕಾಂಗ್ರೆಸ್ ಗೂಂಡಾ ಸರ್ಕಾರ ಎಂದು ಹರಿಹಾಯ್ದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ರೈತರು ಸೌಧದೊಳಗೆ ಬಂದು ಚರ್ಚಿಸುತ್ತೇವೆ ಎಂದರೆ ಲಾಠಿ ಚಾರ್ಜ್ ಮಾಡುತ್ತೀರಿ. ಪಂಚಮಸಾಲಿಗರ ಮೇಲೂ ಲಾಠಿ ಬೀಸಿದ್ದೀರಿ. ಸೌಧದೊಳಗೆ ನುಗ್ಗಿ ಜನಪ್ರತಿನಿಧಿಗಳ ಮೇಲೆ ಹಲ್ಲೆ ಮಾಡಲು ಬಿಟ್ಟಿದ್ದೀರಿ. ಅಧಿಕಾರ ಶಾಶ್ವತವಲ್ಲ, ಅಧಿಕಾರದ ಮದ, ದರ್ಪ ಮತ್ತು ಅಮಲಿನಿಂದ ದೌರ್ಜನ್ಯ ಎಸಗುತ್ತಿದ್ದೀರಿ. ಜನಪ್ರತಿನಿಧಿಗಳ ಮೇಲೆ ಹಲ್ಲೆ ಎಸಗಿದವರನ್ನು ಬಿಟ್ಟು, ಶಾಸಕರನ್ನೇ ಬಂಧಿಸಿರುವ ಧೋರಣೆ ಖಂಡನೀಯ ಎಂದು ಕಿಡಿಕಾರಿದರು.

ಇದು ಕಾಂಗ್ರೆಸ್ ಸರ್ಕಾರವೋ ಹಿಟ್ಲರ್ ಸರ್ಕಾರವೋ? ಪ್ರಜಾಪ್ರಭುತ್ವದ ಕಗ್ಗೊಲೆ ಮಾಡಿಸಿದ ಅಪಕೀರ್ತಿ ಈ ಸರ್ಕಾರಕ್ಕೆ ಸಲ್ಲುತ್ತದೆ. ರಕ್ತ ಸುರಿಯುತ್ತಿದ್ದರೂ ಆಸ್ಪತ್ರೆಗೆ ಕರೆದುಕೊಂಡು ಹೋಗಿಲ್ಲ. ಕುಡಿಯಲು ನೀರು, ಒಂದು ತುತ್ತು ಊಟ ನೀಡಿಲ್ಲ. ಮನುಷ್ಯತ್ವ ಇರುವ ಸರ್ಕಾರ ಈ ರೀತಿ ಮಾಡಲ್ಲ. ಸಿ.ಟಿ.ರವಿ ಉಗ್ರವಾದಿನಾ? ಸಿ.ಟಿ.ರವಿ ಮೇಲಿನ ಕೇಸ್ ಹಿಂಪಡೆಯಬೇಕು. ಹಲ್ಲೆಗೆ ಯತ್ನಿಸಿದವರನ್ನು ಕೂಡಲೇ ಬಂಧಿಸಬೇಕು ಎಂದು ಒತ್ತಾಯಿಸಿದರು.

ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಮೇಲೆ ಹಿಂದೂಗಳ ಮೇಲೆ ದೌರ್ಜನ್ಯ ನಡೆಸುತ್ತಿದ್ದಾರೆ. ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿಯಂತಾಗಿವೆ. ಗೂಂಡಾಗಳಂತ ಆಡಳಿತ ನಡೆಸುತ್ತಿದ್ದಾರೆ. ವಿಧಾನಸೌಧಕ್ಕೆ ಬರಬೇಕದಾರೆ ಜನಪ್ರತಿನಿಧಿಗಳು ಸ್ವತಃ ಹಲ್ಲೆಗೊಳಗಾದರೂ, ನಿರೀಕ್ಷಣಾ ಜಾಮೀನು ತೆಗೆದುಕೊಂಡೇ ಬರಬೇಕಾಗುತ್ತದೆ. ಸೌಧದೊಳಗೆ 40 ಜನಪ್ರತಿನಿಧಿ ಮೇಲೆ ಹಲ್ಲೆ ಮಾಡಿ, ಕೊಲೆಗೆ ಯತ್ನಿಸಿದ್ದಾರೆ. ಆದರೂ, ಅವರ ಮೇಲೆ ಕ್ರಮ ಜರುಗಿಸುತ್ತಿಲ್ಲ. ರೊಟ್ಟಿ ತಿರುವಿ ಹಾಕಿದಂಗೆ ವ್ಯವಸ್ಥೆ ಬದಲಾಗಲೇಬೇಕು. ಪೊಲೀಸ್ ಅಧಿಕಾರಿಗಳು ಅಮಾನವೀಯವಾಗಿ ನಡೆಸಿಕೊಂಡಿದ್ದಾರೆ. ಲಾಲು ಪ್ರಸಾದ್ ಯಾದವ್ ಸರ್ಕಾರ ಆದಂತಾಗಿದೆ ಎಂದು ವಾಗ್ದಾಳಿ ನಡೆಸಿದರು.

ಶಾಸಕ ಅಭಯ್ ಪಾಟೀಲ್ ಮಾತನಾಡಿ, ಶಾಸಕರ ಮೇಲೆ ಸುವರ್ಣ ವಿಧಾನಸೌಧದ

ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಂಡಿದ್ದ ಸತ್ಕಾರ ಸಮಾರಂಭ

ರಾಯಬಾಗ: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ನೂತನವಾಗಿ ಆಯ್ಕೆಯಾಗಿರುವ ಜಿಲ್ಲಾಧ್ಯಕ್ಷ ಬಾಬಾಸಾಹೇಬ ಕುಂಬಾರ, ಖಜಾಂಚಿ ಎಸ್.ಎನ್.ಬೆಳಗಾವಿ, ಕಾರ್ಯದರ್ಶಿ ನಾಗರಾಜ ಕರನಿಂಗ ಮತ್ತು ರಾಜ್ಯ ಪರಿಷತ ಸದಸ್ಯ ಎ.ಬಿ.ಬಸ್ತವಾಡ ಅವರನ್ನು ಕ.ರಾ.ಸ.ನೌಕರರ ಸಂಘದ ತಾಲೂಕು ಘಟಕದಿಂದ ಸತ್ಕರಿಸಲಾಯಿತು.

ಬುಧವಾರ ಸಾಯಂಕಾಲ ಪಟ್ಟಣದ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಂಡಿದ್ದ ಸತ್ಕಾರ ಸಮಾರಂಭದಲ್ಲಿ ಸತ್ಕಾರ ಸ್ವೀಕರಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಬಾಬಾಸಾಹೇಬ ಕುಂಬಾರ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗೆ ಒಳಪಡುವ ಎಲ್ಲ 8 ತಾಲೂಕಗಳ ಪದಾಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ರಾಜ್ಯದಲ್ಲಿಯೇ ಮಾದರಿ ಸಂಘಟನೆಯನ್ನಾಗಿ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಸರ್ಕಾರಿ ನೌಕರರ ಎಲ್ಲ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಮುಂಬರುವ ರಾಜ್ಯ ಪರಿಷತ ಚುನಾವಣೆಯಲ್ಲಿ ನೌಕರರ ಹಿತ ಕಾಪಾಡುವವರನ್ನು ಬೆಂಬಲಿಸೋಣ ಎಂದರು. ರಾಯಬಾಗ ಸರ್ಕಾರಿ ನೌಕರರ ಭವನ ನವೀಕರಣಕ್ಕೆ ಅನುದಾನ ಕೊಡಿಸಲು ಪ್ರಯತ್ನಿಸುವುದಾಗಿ ಹೇಳಿದರು.

ಕ.ರಾ.ಸ.ನೌಕರರ ಸಂಘದ ತಾಲೂಕಾಧ್ಯಕ್ಷ ಉಮೇಶ ಪೋಳ ಮಾತನಾಡಿ, ಜಿಲ್ಲಾಧ್ಯಕ್ಷರ ಮಾರ್ಗದರ್ಶನದಲ್ಲಿ ತಾಲೂಕು ಸಂಘವನ್ನು ಬೆಳೆಸಲು ಮತ್ತು ಸಂಘದ ಕಟ್ಟಡ ನವೀಕರಣಗೊಳಿಸಲು ಪ್ರಯತ್ನಿಸುವುದಾಗಿ ಹೇಳಿದರು.

ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಕ.ರಾ.ಸ.ನೌಕರರ ಸಂಘದ ಜಿಲ್ಲಾ ಖಜಾಂಚಿ ಎಸ್.ಎನ್.ಬೆಳಗಾವಿ, ಕಾರ್ಯದರ್ಶಿ ನಾಗರಾಜ ಕರನಿಂಗ, ರಾಜ್ಯ ಪರಿಷತ ಸದಸ್ಯ ಎ.ಬಿ.ಬಸ್ತವಾಡ, ತಾಲೂಕು ಕಾರ್ಯದರ್ಶಿ ಶಂಕರಗೌಡ ಪಾಟೀಲ, ಖಜಾಂಚಿ ಸಿದ್ದಲಿಂಗಪ್ಪ ನರಗಟ್ಟಿ, ರಾಜ್ಯ ಪರಿಷತ ಸದಸ್ಯ ಮಲ್ಲಿಕಜಾನ ಕೊರ್ಬು, ವಿಶ್ವನಾಥ ಹಾರೂಗೇರಿ, ನಂದಕುಮಾರ ಪಾಟೀಲ, ವಿನೋದ ಚವ್ಹಾಣ, ಬಿ.ಎಲ್.ಘಂಟಿ, ಎಮ್.ಕೆ.ಶೇತಸನದಿ, ವಿನಾಯಕ ಭಾಟೆ,

ಪ್ರಭು ಮಳವಾಡ, ವಿ.ಬಿ.ಅರಗೆ, ಸುಖದೇವ ಕಾಂಬಳೆ, ಎಸ್.ಬಿ.ಮಾನೆ, ಎಲ್.ಬಿ.ಬನಶಂಕರಿ ಸೇರಿ ನೂತನವಾಗಿ ನೇಮಕಗೊಂಡ ತಾಲೂಕು ನಿರ್ದೇಶಕರು ಇದ್ದರು.

ವಿದ್ಯಾರ್ಥಿಗಳು ತಂದೆ ತಾಯಿಗಳ ಕಷ್ಟವನ್ನು ಅರಿತು ಶೈಕ್ಷಣಿಕ ಪ್ರಗತಿಯನ್ನು ಹೊಂದಬೇಕು

ಮುದ್ದೇಬಿಹಾಳ; ವಿಕಾಸಕ್ಕಾಗಿ ಜನಪದ' ಕಾರ್ಯಕ್ರಮ ಸಂಸ್ಕೃತಿಯ ಮೂಲಬೇರಾದ ಜನಪದ ಕಲೆ, ಸಾಹಿತ್ಯ ಮರೆಯಾಗುತ್ತಿರುವ ನಾಡಿನ ಜಾನಪದ ಕಲಾ ಪ್ರಕಾರಗಳ ಪರಿಚಯ ಹಾಗೂ ಜಾಗೃತಿ ಮೂಡಿಸುವುದಾಗಿದೆ ಇಂದಿನ ಯುವ ಪೀಳಿಗೆಯಲ್ಲಿ ನೈತಿಕ ಮೌಲ್ಯಗಳನ್ನು ಬಿಂಬಿಸಲು ಜಾನಪದಿಂದ ಮಾತ್ರ ಸಾಧ್ಯವೆಂದು ಸಮಾಜ ಸೇವಕ ಸಾಹಿತ್ಯ ಪ್ರೇಮಿ ನೇತಾಜಿ ನಲವಡೆ ಹೇಳಿದರು ಶುಕ್ರವಾರ ಪಟ್ಟಣದ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಜಿಲ್ಲಾ ಹಾಗೂ ತಾಲೂಕು ಘಟಕ ಮತ್ತು ಕನ್ನಡ ಜಾನಪದ ಪರಿಷತ್ ಸಂಯುಕ್ತ ಆಶ್ರಯದಲ್ಲಿ ವಿಕಾಸಕ್ಕಾಗಿ ಜಾನಪದ ಸಾಧಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮನ್ನು ಡೋಲು ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು

ನಶಿಸುತ್ತಿರುವ ಜಾನಪದ ಸಾಹಿತ್ಯ ಉಳಿಸುವ ಕೆಲಸವನ್ನು ಪ್ರತಿಯೊಬ್ಬರು ಮಾಡಬೇಕು ಇಂದಿನ ಯುವ ಪೀಳಿಗೆ ಸಹ ಮೊಬೈಲ್ ಗೀಳಿನಿಂದ ಆಚೆಬಂದು ಬದುಕಿನ ಸೋಪಾನ ಮಾಡುವ ಜಾನಪದ ಸಾಹಿತ್ಯ ರುಚಿಯನ್ನು ಅರಿಯಬೇಕಿದೆ ಇಂದಿನ ಸಿನಿಮಾ ಧಾರವಾಹಿ ಸಾಮಾಜಿ-

ಕ ಜಾಲತಾಣಗಳಲ್ಲಿ ಅಶ್ಲೀಲ ಸಾಹಿತ್ಯ ತುಂಬಿದೆ ಹಿಂದಿನ ಸಾಹಿತ್ಯಕ್ಕೂ ಇಂದಿನ ಸಾಹಿತ್ಯಕ್ಕೂ ಅಜಗಜಾಂತರ ವ್ಯತ್ಯಾಸವಿದೆ ಇಂದು ಜಾನಪದ ಹೆಸರಿನಲ್ಲಿ ಕೆಟ್ಟ ಸಾಹಿತ್ಯ ರಚೆನೆ ನಡೆದಿದೆ, ವಿದ್ಯಾರ್ಥಿಗಳು ತಂದೆ ತಾಯಿಗಳ ಕಷ್ಟವನ್ನು ಅರಿತು ಶೈಕ್ಷಣಿಕ ಪ್ರಗತಿಯನ್ನು ಹೊಂದಬೇಕು ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕಾಮರಾಜ ಬಿರಾದಾರ, ಸಾಧನಾ ಮಹಿಳಾ ಒಕ್ಕೂಟದ ಅಧ್ಯಕ್ಷೆ ಗಿರಿಜಾ ಕಡಿ ,ವಾಗ್ಮಿ ಅರವಿಂದ ಕೊಪ್ಪ ಮಾತನಾಡಿ ಸ್ವಾತಂತ್ರ್ಯ ಭಾರತದ ಸಂದರ್ಭದ ಶಿಕ್ಷಣ ನೀತಿಯನ್ನು ಭಾರತೀಯ ಜಾನಪದ ಕೈಬಿಟ್ಟ ಕಾರಣ ಇಂದು ನಮ್ಮ ಸಂಸ್ಕೃತಿ ಅಧಪತನದತ್ತ ಸಾಗಿದೆ ಇಂದು ನೈಜ ಜಾನಪದ ಮೌಲ್ಯ ಕಳೆದುಕೊಂಡಿದೆ ಜಾನಪದ ಹೆಸರಿನಲ್ಲಿ ಬೇರೆ ರೀತಿಯ ಸಾಹಿತ್ಯ ಆಕರ್ಷಕವಾಗುತ್ತಿರುವುದು ದುರಂತ ರಾಜ್ಯದಲ್ಲಿ 15 ವರ್ಷದೊಳಗಿನ 45 ಸಾವಿರ ವಿದ್ಯಾರ್ಥಿನಿಯರು ಅನೈತಿಕತೆಗೆ ಗರ್ಭಧಾರಣೆಯಾಗಿದ್ದಾರೆಂದು ಸರಕಾರದ ದಾಖಲೆಯ ಕಳವಳಕಾರಿಯಾಗಿದೆ ಇದು ಕೇಸ್ ದಾಖಲೆಯಾಗಿರೋದು ಇನ್ನೂ ಕೇಸ್ ಆಗಿರುವುದು ಎಷ್ಟು? ಇಂದು ವಿದ್ಯಾರ್ಥಿಳು ಮೊಬೈಲ್ ನಲ್ಲಿ ಅಶ್ಲೀಲ ವಿಡಿಯೋಗಳಿಂದ ಹಾಳಾಗುತ್ತಿದ್ದಾರೆ ಈ ಬಗ್ಗೆ ಪಾಲಕರು ಮಕ್ಕಳ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ಕಿವಿಮಾತು ಹೇಳಿದರು.

ಜಾನಪದದ ಕುರಿತು ವಿಶೇಷ ಉಪನ್ಯಾಸವನ್ನು ಗಾಯನ ಮೂಲಕ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಂ. ಎಂ ಬೆಳಗಲ್ ನೀಡಿ ಗಮನಸಳೆದರು.

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಾದ ಎ.ಆರ್ ಮುಲ್ಲಾ, ಚೆನ್ನಮ್ಮ ಕವಡಿಮಟ್ಟಿ, ಹಣಮಂತ ಈಳಗೇರ, ಹಣಮಂತ ಗೂಂಧಳೆ, ಮಲ್ಲಿಕಾರ್ಜುನ ಸೂನ್ನದ, ಮಲ್ಲು ಗಂಗನಗೌಡರ, ಹುಸೇನ್ ಮುಲ್ಲಾ,ಶಿವಾನಂದ ಬಿದರಕುಂದಿ, ಅವರನ್ನು ಸನ್ಮಾನಿಸಲಾಯಿತು.

ಪ್ರಾಸ್ತಾವಿಕವಾಗಿ ಕ.ರಾ.ಯು ಸಂ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಪುಂಡಲೀಕ ಮುರಾಳ , ಮಾತನಾಡಿದರು

ಪ್ರಾರ್ಥನೆಯನ್ನು ಯಾಸ್ಮೀನ ಮಕಾನದಾರ ಸ್ವಾಗತ, ಐ ಬಿ ಹಿರೇಮಠ , ಬಿ ಐ ಬಡಿಗೇರ ನಿರೂಪಿಸಿ ವಂದಿಸಿದರು

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮುದ್ದೇಬಿಹಾಳ ಖಾಸ್ಗತೇಶ್ವರ ಮಠದ ಅಧ್ಯಕ್ಷೆ ನೀಲಮ್ಮ ವಿರಕ್ತಮಠ ವಹಿಸಿದ್ದರು, ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಉಪಾಧ್ಯಕ್ಷೆ ಪ್ರೀತಿ ದೇಗಿನಾಳ ಸದಸ್ಯೆ ಪ್ರತಿಭಾ ಅಂಗಡಗೇರಿ, ದಾನಯ್ಯ ಹಿರೇಮಠ ಪ್ರಾಚಾರ್ಯ ಎಸ್ ಎಸ್ ಅಂಗಡಿ ಸೇರಿದಂತೆ ಜಾನಪದ ಕನ್ನಡಪರ ಮುಖಂಡರು ಕಲಾವಿದರು ಸರಕಾರಿ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಉಪಸ್ಥಿತರಿದ್ದರು.

ಅರಣ್ಯ ಹಕ್ಕು ಕಾಯ್ದೆಯಡಿ ಈವರೆಗೆ 16,665 ಪ್ರಕರಣಗಳಲ್ಲಿ ಹಕ್ಕು ಪತ್ರ ವಿತರಣೆ: ಸಿದ್ದರಾಮಯ್ಯ

ಬೆಳಗಾವಿ ಸುವರ್ಣಸೌಧ ಡಿ.19 : ಈವರೆಗೆ ರಾಜ್ಯದಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಒಟ್ಟು 2,99,387 ಅರ್ಜಿಗಳು ಸ್ವೀಕೃತವಾಗಿದ್ದು, 16,665 ಪ್ರಕರಣಗಳಲ್ಲಿ ಹಕ್ಕು ಪತ್ರ ವಿತರಿಸಲಾಗಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಸದಸ್ಯರಾದ ಶಾಂತರಾಮ್ ಬುಡ್ನ ಸಿದ್ದಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಮುಖ್ಯಮಂತ್ರಿಗಳು, ಒಟ್ಟು 2,59,199 ಅರ್ಜಿಗಳು ತಿರಸ್ಕೃತವಾಗಿದ್ದು, 23,583 ಅರ್ಜಿಗಳು ಮಾತ್ರ ಬಾಕಿ ಇರುತ್ತವೆ. ರಾಜ್ಯದಲ್ಲಿ ಅರಣ್ಯ ಹಕ್ಕು ಪತ್ರ ನೀಡುವ ಪ್ರಕ್ರಿಯೆ ನಾನಾ ಕಾರಣಗಳಿಂದ ನಿಧಾನಗತಿಯಲ್ಲಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಅರ್ಜಿದಾರರು ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಅರಣ್ಯ ಹಕ್ಕು ಸಮಿತಿಗಳ ಮುಂದೆ ಸಲ್ಲಿಸದಿರುವುದು. ಪರಿಶಿಷ್ಟ ಪಂಗಡಕ್ಕೆ ಸೇರಿರದ ಇತರೆ ಪಾರಂಪರಿಕ ಅರಣ್ಯವಾಸಿಗಳು 75 ವರ್ಷಗಳಿಂದ ಅರಣ್ಯ ಭೂಮಿ ಅವಲಂಬಿಸಿರುವ ಬಗ್ಗೆ ದಾಖಲೆ ಒದಗಿಸದೇ ಇರುವುದು. ರಾಷ್ಟ್ರೀಯ ಅಭಯಾರಣ್ಯ ಪ್ರದೇಶಗಳಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿಯಾಗುವುದಕ್ಕೂ ಮೊದಲೇ ಅರಣ್ಯವಾಸಿಗಳು ಸ್ಥಳಾಂತರಗೊಂಡಿರುವುದರಿಂದ ಅರ್ಜಿಗಳು ತಿರಸ್ಕೃತವಾಗಿವೆ. ಉಪವಿಭಾಗ ಸಮಿತಿ (SDLC) ಮತ್ತು ಜಿಲ್ಲಾ ಮಟ್ಟದ ಸಮಿತಿ (DLC) ಗಳಲ್ಲಿ ನಾಮನಿರ್ದೇಶಿತ ತಾಲ್ಲೂಕು/ ಜಿಲ್ಲಾ ಪಂಚಾಯಿತಿ ಸದಸ್ಯರಿಲ್ಲದಿರುವ ಕಾರಣಗಳಿಂದ ಅರಣ್ಯ ಹಕ್ಕು ಪತ್ರ ನೀಡುವ ಪ್ರಕ್ರಿಯೆ ನಿಧಾನಗತಿಯಲ್ಲಿರುತ್ತದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ದಿ 25 ರಂದು ಗೋಕಾಕದಿಂದ ಗುಡ್ಡಾಪುರಕ್ಕೆ ಪಾದಯಾತ್ರೆ

ಗೋಕಾಕ : ಪ್ರತಿ ವರ್ಷದಂತೆ ಗೋಕಾಕ ನಗರದಿಂದ ಗುಡ್ಡಾಪುರ ದಾನಮ್ಮ ದೇವಿಯ ದರ್ಶನಕ್ಕಾಗಿ ಹೊರಡುವ ಪಾದಯಾತ್ರೆಯು ಇದೇ ದಿನಾಂಕ 25 ರಂದು ಗೋಕಾಕ ನಗರದ ದಾನಮ್ಮ ದೇವಿಯ ಗುಡಿಯಿಂದ ಬೆಳಿಗ್ಗೆ 5 ಗಂಟೆಗೆ ಹೊರಡುತ್ತದೆ ಎಂದು ಪಾದಯಾತ್ರೆ ಆಯೋಜಕರಾದ ಶ್ರೀ ಸೋಮಯ್ಯ ಹಿರೇಮಠ ಅವರು ತಿಳಿಸಿದ್ದಾರೆ.

ಕಲ್ಲೋಳಿ ಮಾರ್ಗವಾಗಿ ಹೊರಡುವ ಪಾತ್ರೆಯಾತ್ರೆಯ ಅವಧಿ ಸರಿಯಾಗಿ 5 ದಿಸವಾಗುತ್ತದೆ. ಇದೇ ತಿಂಗಳ ದಿನಾಂಕ 29 ರಂದು ಬೆಳಿಗ್ಗೆ 6 ಗಂಟೆಗೆ ಗುಡ್ಡಾಪುರದ ದಾನಮ್ಮ ದೇವಿಗೆ ಪೂಜೆ ನೆರವೇರಿಸಲಾಗುವುದು.

ದಾನಮ್ಮ ದೇವಿಯ ಪಾದಯಾತ್ರೆಗೆ ಬರುವ ಭಕ್ತಾದಿಗಳು ಹೆಚ್ಚಿನ ಮಾಹಿತಿಗಾಗಿ ಸೋಮಯ್ಯ ಹಿರೇಮಠ 9916267250 ಗೋಕಾಕ , ಮಹಾದೇವಿ ಡವಳೇಶ್ವರ 9880435237 ಮೆಳವಂಕಿ, ಸುರೇಶ ಬೈರುಗೋಳ 9886942899 ರಾಜಾಪುರ, ಜಗದೀಶ್ ಕೋತಂಬರಿ 9448916081 ಬೈಲಹೊಂಗಲ, ಶೇಖರ ಮಲಾಮರಡಿ 9008194959 ಚಚಡಿ, ಸಂತೋಷಕುಮಾರ ನಂದೆನ್ನವರ 8147733436 ಸಂಪಗಾವ, ಶಿವನಗೌಡ ಪೊಲೀಸ್ ಪಾಟೀಲ್ 9663005222 ವಕುಂದ ಇವರನ್ನು ಸಂಪರ್ಕಿಸಲು ಕೋರಲಾಗಿದೆ.

ಮಾನವೀಯ ಗುಣವೇ ನಿಜವಾದ ಸಂಪತ್ತು : ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯ

ಹುಕ್ಕೇರಿ: ಮಾನವೀಯ ಗುಣವೇ ನಿಜವಾದ ಸಂಪತ್ತು ಜೀವನದಲ್ಲಿ ಹಣ ಗಳಿಸುವುದೊಂದೇ ಮುಖ್ಯವಲ್ಲ. ಹಣಕ್ಕಿಂತ ಮಾನವೀಯ ಗುಣಗಳನ್ನು ಬೆಳೆಸಿಕೊಂಡರೆ ಇದಕ್ಕಿಂತ ದೊಡ್ಡ ಸಂಪತ್ತು ಬೇರೊಂದಿಲ್ಲ. ಎಂದು ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯಪಟ್ಟರು.

ಪಟ್ಟಣದ ವಿವೇಕಾನಂದ ಸಭಾ ಭವನದಲ್ಲಿ ಆಯೋಜಿಸಿದ ಮಹಾವೀರ ನಿಲಜಗಿ ಫೌಂಡೇಶನ್ ಪ್ರಾರಂಭೋತ್ಸವ, ಮಹಾವೀರ ಮಲ್ಟಿಪರಪಜ್ ಸೌಹಾರ್ದ ಸಹಕಾರಿ ಸಂಘದ ಬೆಳ್ಳಿ ಹಬ್ಬದ ಮಹೋತ್ಸವ ಮತ್ತು ಅವರ 54ನೇ ಹುಟ್ಟು ಹಬ್ಬದ ನಿಮಿತ್ತ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಮಹಾವೀರ ಉದ್ಯೋಗ ಸಮೂಹ ಸಂಸ್ಥೆಗಳ ಮೂಲಕ ಸಹಕಾರ, ಶಿಕ್ಷಣ, ಧಾರ್ಮಿಕ, ರಾಜಕೀಯ, ಬ್ಯಾಂಕಿಂಗ್, ಎಲೆಕ್ಟ್ರಿನಿಕ್, ಸಾಮಾಜಿಕ ಕ್ಷೇತ್ರದಲ್ಲಿ ಮಹಾವೀರ ನಿಲಜಗಿ ಅವರು ಈಗಾಗಲೇ ಅಮೂಲ್ಯ ಸೇವೆ ಸಲ್ಲಿಸಿದ್ದು ಅದರ ಮುಂದುವರೆದ ಭಾಗವಾಗಿ ಮತ್ತಷ್ಟು ಸಾಮಾಜಿಕ ಚಟುವಟಿಕೆಗಳನ್ನು ಕೈಗೊಳ್ಳಲು ಇದೀಗ ಫೌಂಡೇಶನ್ ಸ್ಥಾಪಿಸಿದ್ದಾರೆ ಜನರ ಪ್ರೀತಿ ವಿಶ್ವಾಸಕ್ಕೆ ಪಾತ್ರರಾಗಿದ್ದಾರೆ.

ಸಮಾರಂಭ ಉದ್ಘಾಟಿಸಿದ ಮಹಾವೀರ ಉದ್ಯೋಗ ಸಮೂಹ ಸಂಸ್ಥೆಯ ಅಧ್ಯಕ್ಷರೂ ಆದ ಪುರಸಭೆ ಹಿರಿಯ ಸದಸ್ಯ ಮಹಾವೀರ ನಿಲಜಗಿ ಮಾತನಾಡಿ, ನಿರ್ಗತಿಕರು, ಬಡ, ಮಧ್ಯಮ ವರ್ಗದ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆಗಾಗಿ ಹುಕ್ಕೇರಿಯಲ್ಲಿ ಶೀಘ್ರವೇ ಮಹಾವೀರ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆ ಆರಂಭಿಸಲಾಗುವುದು. ದಿನಬಳಕೆ ಸೇರಿದಂತೆ ಗೃಹೋಪಯೋಗಿ ವಸ್ತುಗಳು ಮಾರಾಟ ಮಳಿಗೆ, ಬಡ ವಿದ್ಯಾರ್ಥಿಗಳಿಗಾಗಿ ಐಎಎಸ್, ಐಎಫ್ಎಸ್ ಮತ್ತಿತರ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಕೋಚಿಂಗ್ ಸೆಂಟರ್ ಆರಂಭಿಸಲಾಗುವುದು ಎಂದರು.

ಇದೇ ವೇಳೆ ನ್ಯಾಯಾಂಗ ಕ್ಷೇತ್ರದಿಂದ ಹಿರಿಯ ನ್ಯಾಯವಾದಿ ಪಿ.ಆರ್. ಚೌಗಲಾ, ವೈದ್ಯಕೀಯ ಕ್ಷೇತ್ರದಿಂದ ಡಾ.ರಮೇಶ ದೊಡಭಂಗಿ, ಡಾ.ಸಂಜೀವ ಪಾಟೀಲ, ಕೃಷಿ ಕ್ಷೇತ್ರದಿಂದ ಪ್ರಗತಿಪರ ರೈತ ಕೆಂಪಣ್ಣಾ ದೇಸಾಯಿ, ಸಹಕಾರಿ ಕ್ಷೇತ್ರದಿಂದ ವಿರುಪಾಕ್ಷಿ ಚೌಗಲಾ ಅವರಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವೇಕಾನಂದ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅಶೋಕ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಮಾತೋಶ್ರೀ ವಿಜಯಮಾಲಾ, ನಿಲಜಗಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ದಿಲೀಪ ಕುರಂದವಾಡೆ, ಸಿಪಿಐ ಮಹಾಂತೇಶ ಬಸಾಪುರ, ಮುಖಂಡರಾದ ರೋಹಿತ ಚೌಗಲಾ, ಬಾಹುಬಲಿ ಸೊಲ್ಲಾಪುರೆ, ಸಂಜಯ ನಿಲಜಗಿ, ರಾಜು ಶೆಟ್ಟಿ, ಸಂಜು ಖತಗಲ್ಲಿ, ಅಪ್ಪಾಸಾಹೇಬ ಚೌಗಲಾ, ರಾಜೇಂದ್ರ ಪಾಟೀಲ, ಸಂತೋಷ ರಜಪೂತ, ಸಂಗಮೇಶ ಕರಹೊನ್ನವರ ಮತ್ತಿತರರು ಉಪಸ್ಥಿತರಿದ್ದರು. ಪ್ರಜ್ವಲ ನಿಲಜಗಿ ಸ್ವಾಗತಿಸಿದರು. ಅಂಜನಾ ಗುಗ್ಗಳಿ ನಿರೂಪಿಸಿದರು. ನಿರ್ಮಲಾ ಪಾಟೀಲ ವಂದಿಸಿದರು.

ಕರ್ನಾಟಕ ಪ್ರವಾಸೋದ್ಯಮ ರೋಪ್ ವೇ ವಿಧೇಯಕ-2024 ಪರಿಷತ್ತಿನಲ್ಲಿ ಅಂಗೀಕಾರ

ಬೆಳಗಾವಿ ಸುವರ್ಣಸೌಧ : ಕಾನೂನು ಸಚಿವರಾದ ಹೆಚ್.ಕೆ.ಪಾಟೀಲ್ ಅವರು ವಿನೂತನವಾಗಿ ತಂದಿರುವ ಕರ್ನಾಟಕ ಪ್ರವಾಸೋದ್ಯಮ ರೋಪ್ ವೇ ವಿಧೇಯಕ-2024ವು ವಿಧಾನ ಪರಿಷತ್ತಿನಲ್ಲಿ ಡಿ.18ರಂದು ಅಂಗೀಕಾರವಾಯಿತು.

ಸಚಿವರ ಕೋರಿಕೆಯ ಮೇರೆಗೆ ಸಭಾಪತಿಯವರು ವಿಧೇಯಕ ಮೇಲೆ ಮಾತನಾಡಲು ಅವಕಾಶ ನೀಡಿದರು.

ಸದಸ್ಯರಾದ ತಿಪ್ಪೇಸ್ವಾಮಿ ಕೆ.ಎ., ಕೇಶವ ಪ್ರಸಾದ್, ನವೀನ್, ಸಿ.ಟಿ.ರವಿ ಅವರು ಮಾತನಾಡಿ, ಕರ್ನಾಟಕ ರಾಜ್ಯ ಕೂಡ ರೋಪ್ ವೇ ಮ್ಯಾಪನಡಿ ಬರಬೇಕಿತ್ತು ಎಂಬುದು ನಮ್ಮೆಲ್ಲರ ಆಶಯವಾಗಿತ್ತು. ಇದೀಗ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ವಿಧೇಯಕ ಅಂಗೀಕಾರವಾಗುತ್ತಿರುವುದು ಸಂತಷ ಮತ್ತು ಸ್ವಾಗತಾರ್ಹ ಸಂಗತಿ ಎಂದರು. ಈ ರೋಪ್ ವೇಗಳನ್ನು ಪ್ರತಿ ತಿಂಗಳು ನಿರ್ವಹಣೆ ಮಾಡುವ ಕಾರ್ಯವಾಗಬೇಕು. ಅತ್ಯಂತ ದುರ್ಗಮ ಪ್ರದೇಶದಲ್ಲಿ ಈ ರೋಪ್ ವೇಗಳನ್ನು ಅಳವಡಿಸುವುದರಿಂದ ಸುರಕ್ಷತೆಗೆ ಹೆಚ್ಚಿನ ಒತ್ತು ಕೊಡಬೇಕು. ಇದನ್ನು ವಿಮಾ ಯೋಜನೆ ವ್ಯಾಪ್ತಿಗೊಳಪಡಿಸಬೇಕು ಎಂದು ಸಲಹೆ ಮಾಡಿದರು.

ಕೊಪ್ಪಳ ಜಿಲ್ಲೆಯ ಸುಪ್ರಸಿದ್ಧ ಧಾರ್ಮಿಕ ತಾಣ ಅಂಜನಾದ್ರಿಯಲ್ಲಿ ಜನತೆಗೆ ಅನುಕೂಲವಾಗುವ ಮಾದರಿಯಲ್ಲಿ ರೋಪ್ ವೇ ನಿರ್ಮಾಣವಾಗಬೇಕು ಎಂದು ಸದಸ್ಯೆ ಹೇಮಲತಾ ನಾಯಕ ಅವರು ಸಲಹೆ ಮಾಡಿದರು.

ರಾಜ್ಯ ಸರ್ಕಾರವು ರೋಪ್ ವೇ ಪ್ರವಾಸೋದ್ಯಮಕ್ಕೆ ಹೆಚ್ಚಿನ ಒತ್ತು ಕೊಡಲು ಈ ವಿಧೇಯಕ ಜಾರಿಗೆ ಮುಂದಾಗಿದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

ಸದನದಲ್ಲಿ ಮಂಡಿಸಿದ ವಿಧೇಯಕಕ್ಕೆ ಅನುಮೋದನೆ ನೀಡಿ, ಅಂಗೀಕರಿಸಬೇಕು ಎಂದು ಸಚಿವರು ಕೋರಿದರು. ಬಳಿಕ ಧ್ವನಿಮತದ ಮೂಲಕ ಸದನವು ವಿಧೇಯಕವನ್ನು ಅಂಗೀಕರಿಸಿತು.

ಒಬ್ಬ ಯಶಸ್ವಿ ಪರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ

ಬೈಲಹೊಂಗಲ : ಒಬ್ಬ ಯಶಸ್ವಿ ಪರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ ಅನ್ನುವುದಕ್ಕೆ ಉತ್ತಮ ಉದಾಹರಣೆ ರೋಹಿಣಿ ಪಾಟ

ಸ್ಕೌಟ್ಸ್ - ಗೈಡ್ಸ್ : ಜ. 6 ರಿಂದ ನಾಲ್ಕು ದಿನ ಧಾರವಾಡದಲ್ಲಿ ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೆಟ್ ಮಕ್ಕಳ ಸಮಾವೇಶ ಆಯೋಜನೆ

ಧಾರವಾಡ : ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ದ ಧಾರವಾಡ ಜಿಲ್ಲಾ ಘಟಕದಿಂದ ತಾಲೂಕಿನ ದಡ್ಡಿ ಕಮಲಾಪೂರದಲ್ಲಿ ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೆಟ್ ಮಕ್ಕಳ ಸಮಾವೇಶವನ್ನು ಜನೆವರಿ 6 ರಿಂದ ಜನೆವರಿ 10, 2025 ರವರೆಗೆ ಆಯೋಜಿಸಲಾಗಿದೆ ಎಂದು ಸ್ಕೌಟ್ಸ್ ಮತ್ತು ಗೈಡ್ಸ್‌ದ ಜಿಲ್ಲಾ ಮುಖ್ಯ ಆಯುಕ್ತ ಶ್ರೀಶೈಲ ಕರಿಕಟ್ಟಿಯವರು ಹೇಳಿದರು.

\ಅವರು ಇಂದು ಬೆಳಿಗ್ಗೆ ಧಾರವಾಡ ಕೋರ್ಟ ವೃತ್ತದ ಹತ್ತಿರ ಇರುವ ಸ್ಕೌಟ್ಸ್ ಮತ್ತು ಗೈಡ್ಸ್‌ದ ಜಿಲ್ಲಾ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ಜರುಗಿಸಿ ಮಾತನಾಡಿದರು.

ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೆಟ್ ಮಕ್ಕಳ ಸಮಾವೇಶದಲ್ಲಿ ಬೆಳಗಾವಿ ವಿಭಾಗದ 8 ಶೈಕ್ಷಣಿಕ ಜಿಲ್ಲೆಗಳಾದ ಕಾರವಾರ, ಶಿರಸಿ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಾಗಲಕೋಟ, ವಿಜಯಪುರ ಜಿಲ್ಲೆಗಳಿಂದ 800 ಜನ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳು ಭಾಗವಹಿಸಲಿದ್ದಾರೆ.

ಕಾಲೇಜುಗಳ 120 ರೋವರ್ಸ್ ಮತ್ತು ರೇಂಜರ್ಸ್ ಮಕ್ಕಳು 80 ಜನ ಸ್ಕೌಟ್ಸ್ ಮತ್ತು

ಗೈಡ್ಸ್ ಶಿಕ್ಷಕರು ಹಾಗೂ ಕಾರ್ಯಕ್ರಮದ ಆಯೋಜನೆ ಮತ್ತು ಉಸ್ತುವಾರಿಗಾಗಿ 200 ಜನ ಸಿಬ್ಬಂದಿಗಳು ಸೇರಿ ಒಟ್ಟು 1,200 ಜನರು ಭಾಗವಹಿಸಲಿದ್ದಾರೆ.

ಕಾರ್ಮಿಕ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಹಿರಿಯ ಅಧಿಕಾರಿಗಳು ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್‌ನ ಆಯಾ ಜಿಲ್ಲೆಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾವಾರು ಪ್ರತಿಯೊಂದು ಜಿಲ್ಲೆಯನ್ನು ಪ್ರತಿನಿಧಿಸುವ ಮಕ್ಕಳಿಂದ ಸಾಹಸಮಯ ಚಟುವಟಿ-ಕೆಗಳಾದ ಹಗ್ಗ ಏರುವುದು, ಸಮತೋಲನ ನಡೆಗೆ, ಕಮಾಂಡ್ ಗೋಡೆ, ಸಮತೋಲನ ಬ್ರಿಡ್ಜ್, ಹ್ಯಾಂಗಿಂಗ ಬ್ರಿಡ್ಜ್, ಟಾಯರ ಪಾಸಿಂಗ ವಾಚಿಂಗ ಟಾವರ ಮುಂತಾದ ಚಟುವಟಿಕೆಗಳು, ಕಲಾಪ್ರಕಾರಗಳು, ತಿಂಡಿ ತಿನಿಸುಗಳು ಹಾಗೂ ಉಡುಗೆ ತೊಡುಗೆಗಳು ಪ್ರದರ್ಶನಗೊಳ್ಳಲಿವೆ ಎಂದರು.

ಮಕ್ಕಳ ಪ್ರದರ್ಶನ, ಶೈಕ್ಷಣಿಕ ಉಪನ್ಯಾಸಗಳು, ರಸಪ್ರಶ್ನೆ ಕಾರ್ಯಕ್ರಮ, ಯೋಗಯಾಮ, ಸ್ವಚ್ಛತಾ ಕಾರ್ಯ ಚಟುವಟಿಕೆ, ಶಿಬಿರವಾಸದ ಕಲ್ಪನೆ ಜಿಲ್ಲೆಯ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆ, ಶೈಕ್ಷಣಿಕ ಜಾಗೃತಿ ಮೂಡಿಸುವ ಮೌಲ್ಯಾಧಾರಿತ ಶಿಕ್ಷಕರೇ ನಿರ್ಮಿಸಿದ ಕಿರುಚಿತ್ರಗಳ ಪ್ರದರ್ಶನ, ಜಾನಪದ, ಸಂಗೀತ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಮಕ್ಕಳಲ್ಲಿ ನಮ್ಮ ಕಲೆ ಸಂಸ್ಕೃತಿಯ ಬಗ್ಗೆ ಅರಿವು ಮತ್ತು ಗೌರವ, ಶಿಸ್ತು, ಸಂಯಮ, ಮಾನವೀಯ ಮೌಲ್ಯಗಳು ಮುಂತಾದ ಸಕಾರಾತ್ಮಕ ಗುಣಗಳನ್ನು ರೂಢಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಶ್ರೀಶೈಲ ಚ. ಕರಿಕಟ್ಟಿ ಅವರು ತಿಳಿಸಿದರು.

ಸಭೆಯಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಉಪಾಧ್ಯಕ್ಷ ವಿ.ವಿ.ಕಟ್ಟಿ, ಕೋಶಾಧಿಕಾರಿ ಬಸವರಾಜ ಕಡಕೋಳ, ಸ್ಕೌಟ್ಸ್ ಆಯುಕ್ತ ಎಸ್. ಐ. ನೇಕಾರ, ಸ್ಥಾನಿಕ ಆಯುಕ್ತರಾದ ಎಸ್. ವಿ. ಮೊರಬ, ಜಿಲ್ಲಾ ಸಹಾಯಕ ಆಯುಕ್ತ ಮಂಜುನಾಥ ಅಡಿವೇರ, ಸಿ. ಸಿ. ಅಳಗೋಡಿ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್‌ನ ಶಿಕ್ಷಕರು ಉಪಸ್ಥಿತರಿದ್ದರು

ಪ್ರಥಮ ಕಿತ್ತೂರು ಕರ್ನಾಟಕ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳ ಸಮಾವೇಶದ ಲೋಗೋ ಬಿಡುಗಡೆ

ಧಾರವಾಡ : ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಘಟಕ ಧಾರವಾಡದ ವತಿಯಿಂದ ಜನವರಿ 6 ರಿಂದ ಜನವರಿ 10 ರವರೆಗೆ ಧಾರವಾಡ ತಾಲೂಕಿನ ದಡ್ಡಿಕಮಲಾಪೂರದಲ್ಲಿರುವ ಸ್ಕೌಟ್ಸ್ ಮತ್ತು ಗೈಡ್ಸ್‌ದ ಜಿಲ್ಲಾ ತರಬೇತಿ ಕೇಂದ್ರದಲ್ಲಿ ನಡೆಯಲಿರುವ ಪ್ರಥಮ ಕಿತ್ತೂರು ಕರ್ನಾಟಕ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳ ಸಮಾವೇಶ-ಜಾಂಬೋರೇಟ್‌ದ ನಿಮಿತ್ತ ರಾಷ್ಟ್ರಭಕ್ತಿ, ದೇಶದ ಶಕ್ತಿ ಎಂಬ ಘೋಷವಾಕ್ಯವನ್ನೊಳಗೊಂಡ ಲೋಗೋವನ್ನು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಇಂದು ಸಂಜೆ ಕಚೇರಿಯಲ್ಲಿ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಮುಖ್ಯ ಆಯುಕ್ತ ಶ್ರೀಶೈಲ ಕರಿಕಟ್ಟಿ, ಜಿಲ್ಲಾ ಉಪಾಧ್ಯಕ್ಷ ವಿ.ವಿ.ಕಟ್ಟಿ, ಕೋಶಾಧಿಕಾರಿ ಬಸವರಾಜ ಕಡಕೋಳ, ಆಯುಕ್ತ ಎಸ್.ಐ.ನೇಕಾರ, ಸಹಾಯಕ ಆಯುಕ್ತ ಎಂ.ವಿ.ಅಡವೇರ ಹಾಗೂ ಇತರರು ಇದ್ದರು.

ಚೂರು-ಪಾರು

ನರಗುಂದ ತಾಲೂಕಿನಲ್ಲಿ ಖಾಲಿ ಇರುವ ಯುವ ಪರಿವರ್ತಕರ ಹುದ್ದೆಗೆ ಅರ್ಜಿ ಆಹ್ವಾನ

ಗದಗ : ಗದಗ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನ ಆರೋಗ್ಯ ಕೇಂದ್ರ ಎಪಿಡಿಮಿಯಾಲಜಿ ವಿಭಾಗ ರಾಷ್ಟ್ರೀಯ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಬೆಂಗಳೂರು (ನಿಮ್ಹಾನ್ಸ್) ಇವರ ಸಹಯೋಗದಲ್ಲಿ ಆರಂಭಿಸಲಾಗಿರುವ ಯುವ ಸ್ಪಂದನ ಕೇಂದ್ರದಲ್ಲಿ ನರಗುಂದ ತಾಲೂಕಿನಲ್ಲಿ 01 ಯುವ ಪರಿವರ್ತಕರ ಹುದ್ದೆ ಖಾಲಿ ಇದ್ದು ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಇಚ್ಛಿಸುವವರು ಈ ಕೆಳಕಾಣಿಸಿದ ಅರ್ಹತೆಯನ್ನು ಹೊಂದಿರಬೇಕು.

ಯುವ ಪರಿವರ್ತಕರ ಹುದ್ದೆಗೆ ಕಾರ್ಯನಿರ್ವಹಿಸಲು ಇಚ್ಛಿಸುವವರು. ಪದವಿಧರರಾಗಿರಬೇಕು. ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು. ವಾಕ್‌ಚಾತುರ್ಯ ಹೊಂದಿರಬೇಕು. ಕಂಪ್ಯೂಟರ್ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು. ಆಸಕ್ತ ಯುವಕ/ಯುವತಿಯರು ತಮ್ಮ ಸ್ವ ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಗದಗ ಇಲ್ಲಿ ಡಿಸೆಂಬರ್ 31 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಆಯ್ಕೆಯಾದ ಅಭ್ಯರ್ಥಿಗೆ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ , ಬೆಂಗಳೂರು(ನಿಮ್ಹಾನ್ಸ್) ಇಲ್ಲಿ ತರಬೇತಿ ನೀಡಲಾಗುವುದು. ಆಯ್ಕೆಯಾದ ಯುವ ಪರಿವರ್ತಕರಿಗೆ ಗೌರವ ಸಂಭಾವನೆ ಹಾಗೂ ಪ್ರವಾಸ ಭತ್ಯೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 7349223455 ಕಚೇರಿ ದೂರವಾಣಿ ಸಂಖ್ಯೆ 08372-238345 ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಕೊಪ್ಪಳ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಮಹಿಳಾ ಸಬಲೀಕರಣ ಘಟಕದಡಿಯಲ್ಲಿ ಜಿಲ್ಲಾ ಮಿಷನ್ ಸಂಯೋಜಕ, ಪಿಎಂ-ಎಂವಿವೈ ಜಿಲ್ಲಾ ಸಂಯೋಜಕ ಹಾಗೂ ಹಣಕಾಸು ಸಾಕ್ಷರತೆ ಮತ್ತು ಲೆಕ್ಕಪರಿಶೋಧಕ ಹುದ್ದೆಗೆ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ, ಸಾಮಾನ್ಯ ಅರ್ಹತಾ ಪಟ್ಟಿ, ತಿರಸ್ಕೃತ ಪಟ್ಟಿಗಳನ್ನು ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳಿಗೆ ಆಹ್ವಾನಿಸಲಾಗಿದೆ.

ಈ ಪಟ್ಟಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಆಕ್ಷೇಪಣೆಗಳನ್ನು ಸಲ್ಲಿಸಲು ಡಿಸೆಂಬರ್ 28 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಕಚೇರಿ ಅವಧಿಯಲ್ಲಿ ಲಿಖಿತ ರೂಪದಲ್ಲಿ ಆಕ್ಷೇಪಣೆಗಳನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಇಲ್ಲಿಗೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ಮಟ್ಟದ ಮಿಷನ್ ಶಕ್ತಿ ಯೋಜನೆಯ ಪರಿಶೀಲನಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಸ್ತಿ ಕುಸ್ತಿಯೇತರ ಕ್ರೀಡಾಪಟುಗಳಿಗೆ ಮಾಸಾಶನಕ್ಕಾಗಿ ಅರ್ಜಿ ಆಹ್ವಾನ

ಕೊಪ್ಪಳ : ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕಷ್ಟ ಪರಿಸ್ಥಿತಿಯಲ್ಲಿರುವ ಕುಸ್ತಿ, ಕುಸ್ತಿಯೇತರ ಕ್ರೀಡಾಪಟುಗಳಿಗೆ ಮಾಸಾಶನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕೊಪ್ಪಳ ಜಿಲ್ಲೆಯಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿ 50 ವರ್ಷ ಮೇಲ್ಪಟ್ಟ ಮತ್ತು ಕಷ್ಟ ಪರಿಸ್ಥಿತಿಯಲ್ಲಿರುವ ಕುಸ್ತಿ, ಕುಸ್ತಿಯೇತರ ಕ್ರೀಡಾ ಪಟುಗಳ ಜೀವನ ಸುಗಮವಾಗಿಸಲು ಮಾಸಾಶನ ನೀಡಲಾಗತ್ತಿದ್ದು, ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿದವರಿಗೆ ಪ್ರತಿ ತಿಂಗಳಿಗೆ 5000 ರೂ.ಗಳ ಮಾಸಾಶನ, ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿದವರಿಗೆ ಪ್ರತಿ ತಿಂಗಳು 4000 ರೂ.ಗಳ ಮಾಸಾಶನ ಮತ್ತು ರಾಜ್ಯ ಮಟ್ಟದಲ್ಲಿ ಭಾಗವಹಿಸಿದವರಿಗೆ ಪ್ರತಿ ತಿಂಗಳಿಗೆ 3500 ರೂ.ಗಳ ಮಾಸಾಶನ ಸಿಗಲಿದೆ. ಆಸಕ್ತ ಅಭ್ಯಥಿಗಳು ತಾವು ಪಂದ್ಯಾವಳಿಗಳಲ್ಲಿ ಭಾಗವಹಿಸಿ ವಿಜೇತರಾದ ಸಂದರ್ಭದಲ್ಲಿ ಪ್ರಶಸ್ತಿ ಪತ್ರ, ಕರಪತ್ರ, ಬ್ಯಾನರ್, ಪದಕಗಳು ಮತ್ತು ಆಮಂತ್ರಣ ಪತ್ರಿಕೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಅರ್ಜಿದಾರರು ಕನಿಷ್ಠ 50 ವರ್ಷ ವಯಸ್ಸಿನವರಾಗಿರಬೇಕು. ವಯಸ್ಸಿನ ಧೃಡೀಕರಣವನ್ನು ಸರ್ಕಾರದ ಆರೋಗ್ಯ ಇಲಾಖಾ ಜಿಲ್ಲಾ ಸರ್ಜನ್‌ರವರು ಪರಿಶೀಲಿಸಿ ನೀಡಿರಬೇಕು. ಶಾಲಾ ವ್ಯಾಸಂಗ ಪ್ರಮಾಣ ಪತ್ರ ಲಗತ್ತಿಸಬೇಕು ಹಾಗೂ ಶಾಲಾ ವ್ಯಾಸಂಗ ಪ್ರಮಾಣ ಪತ್ರ ಇಲ್ಲದಿದ್ದಲ್ಲಿ ಕೋರ್ಟ ಅಫಿಡಿವಿಟ್ ಸಲ್ಲಿಸಬೇಕು. ಅರ್ಜಿದಾರರ ವಾರ್ಷಿಕ ಆದ-ಾಯ ಎಲ್ಲಾ ಮೂಲಗಳು ಸೇರಿ ರೂ. 20,000 ಗಳಿಗೆ ಮೀರಿರಬಾರದು. ವೃದ್ಧಾಪ್ಯ ವೇತನ ಪಡೆಯುತ್ತಿದ್ದರೆ ಅರ್ಜಿದಾರರ ವಾರ್ಷಿಕ ಆದಾಯಕ್ಕೆ ಇದನ್ನೂ ಲೆಕ್ಕ ಹಾಕಬಹುದು. ಒಂದು ವೇಳೆ ಅರ್ಜಿದಾರರು ಮಾನ್ಯತೆ ಪಡೆದ ಪಂದ್ಯಾವಳಿಗಳಲ್ಲಿ ಭಾಗವಹಿಸಿದ್ದಾಗ ಆಕಸ್ಮಿಕ ಘಟನೆಯಿಂದ ಶಾಶ್ವತವಾಗಿ ಅಸಮರ್ಥರಾದರೆ ಅಂಥವರಿಗೆ ಧನ ಸಹಾಯ ಮಂಜೂರು ಮಾಡಲು ಸರ್ಕಾರದ ಅನುಮೋದನೆಯನ್ನು ಪ್ರತಿಯೊಂದು ಅರ್ಜಿದಾರರ ವಿಷಯದ ಅರ್ಹತೆಗನುಗುಣವಾಗಿ ಪಡೆಯಬೇಕಾಗುತ್ತದೆ. ಇದರ ಬಗ್ಗೆ ಸ್ವಯಂ ದೃಡೀಕರಣ ಸಲ್ಲಿಸಬೇಕು.

ಅರ್ಜಿದಾರರು ಅವರ ಕ್ರೀಡಾ ಕ್ಷೇತ್ರದಲ್ಲಿ ಭಾಗವಹಿಸಿದ ಕರ ಪತ್ರಗಳು, ಪ್ರಶಸ್ತಿ ಪತ್ರಗಳು, ಪೋಟೊ, ಮತ್ತು ಬ್ಯಾಂಕ ಪಾಸಪುಸ್ತಕ ಝರಾಕ್ಸ ಪ್ರತಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಬಡತನದಲ್ಲಿದ್ದಾರೆಂಬುದನ್ನು ವಿಚಾರಣೆ ಸಂದರ್ಭದಲ್ಲಿ ಪರಿಶೀಲನಾಧಿಕಾರಿಯವರಲ್ಲಿ ಧೃಡೀಕರಿಸಬೇಕು. ತಹಶೀಲ್ದಾರರಿಂದ ಪಡೆದ ಆದಾಯ ಧೃಡೀಕರಣ ಪತ್ರ ಸಲ್ಲಿಸಬೇಕು. ಅರ್ಜಿದಾರರು ಸಾಮಾಜಿಕ ಮತ್ತು ಆರ್ಥಿಕ ಪರಿಸ್ಥಿತಿಯನ್ನು ಬಹಿರಂಗಪಡಿಸಬೇಕು ಮತ್ತು ಸರ್ಕಾರದಿಂದ ಇತರೆ ಯಾವುದೇ ಮಾಸಾಶನವನ್ನು ಪಡೆಯುತ್ತಿರುದಿಲ್ಲವೆಂದು ದೃಢೀಕರಣ ನೀಡುವುದು ಕಡ್ಡಾಯ.

ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೊಪ್ಪಳ ಜಿಲ್ಲಾ ಕ್ರೀಡಾಂಗಣ, ಕೊಪ್ಪಳ ಈ ಕಛೇರಿಯಲ್ಲಿ ಪಡೆದು ಭರ್ತಿ ಮಾಡಿ, ಡಿಸೆಂಬರ್ 24 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 08539-230121 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಕಾರವಾರ - ಪ್ರವಾಸೋದ್ಯಮ ಇಲಾಖೆಯಿಂದ 2024-25 ನೇ ಸಾಲಿನ "ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ / ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪ್ರವಾಸೋದ್ಯಮ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಯ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅತಿಥ್ಯ ಕ್ಷೇತ್ರ Food Craft Institute (FCI), Mysore ಹಾಗೂ Institute of Hotel Management (IHM) ಬೆಂಗಳೂರು ರವರ ಮೂಲಕ ವಸತಿಸಹಿತ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಆಸಕ್ತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಡಿ.28 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಆರ್.ಟಿ.ಓ. ಕಚೇರಿ ಹತ್ತಿರ, ಕಾರವಾರ ದೂರವಾಣಿ ಸಂಖ್ಯೆ: 08382-221172 ನ್ನು ಸಂಪರ್ಕಿಸುವಂತೆ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲಗೇರಿ ಕೆರೆ ಭೇಟಿ : ಅಭಿವೃದ್ಧಿ ಪರಿಶೀಲನೆ

ಧಾರವಾಡ : ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಕಳೆದ ನವೆಂಬರ್ 23, 2024 ರಂದು ಸಾರ್ವಜನಿಕರ ದೂರಗಳ ಹಿನ್ನಲೆಯಲ್ಲಿ ಧಾರವಾಡ ನಗರದ ಕೆಲಗೇರಿ ಕೆರೆಗೆ ಭೇಟಿ ನೀಡಿ, ಸ್ವಚ್ಛತೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಪರಿಶೀಲಿಸಿದಾಗ ಕೆರೆಯ ಸುತ್ತಮುತ್ತ ಬೆಳೆದಿದ್ದ ಕಳೆ ಮತ್ತು ಕಸವನ್ನು 20 ದಿವಸದ ಒಳಗಾಗಿ ಮಹಾನಗರ ಪಾಲಿಕೆಯಿಂದ ಸ್ವಚ್ಛಗೊಳಿಸಬೇಕೆಂದು ಮತ್ತು ಕೃಷಿ ವಿಶ್ವವಿದ್ಯಾಲಯದವರು ಕೆರೆಯಲ್ಲಿನ ಜಲ ಕಳೆ (ವಿಡ್) ತೆಗೆಯಬೇಕೆಂದು ನಿರ್ದೇಶಿಸಿದ್ದರು. ಈ ನಿರ್ದೇಶನವನ್ನು ಪಾಲಿಸಿದ ಕು-ರಿತು ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪರಿಶೀಲಿಸಿ ತಕ್ಷಣ ವರದಿ ನೀಡಬೇಕೆಂದು ನಿರ್ದೇಶಿಸಿದ್ದಾರೆ.

ಈ ಹಿನ್ನಲೆಯಲ್ಲಿ ಇಂದು (ಡಿ.19) ಬೆಳಿಗ್ಗೆ ಹಿರಿಯ ಸಿವಿಲ್

ನ್ಯಾಯಾಧೀಶರು ಆಗಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪಿ.ಎಫ್. ದೊಡ್ಡಮನಿ ಅವರು ಕೆಲಗೇರಿ ಕೆರೆಗೆ ಹಿರಿಯ ನಾಗರಿಕರು ಮತ್ತು ಮಹಾನಗರ ಪಾಲಿಕೆಯ ಅಧಿಕಾ-ರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.

ಪರಿಶೀಲನೆ ಸಂದರ್ಭದಲ

ವಿಶ್ವಧ್ಯಾನ ದಿನ

ಡಿಸೆಂಬರ 21 ರಂದು ವಿಶ್ವಧ್ಯಾನದಿನ ಎಂದು ಘೋಷಿಸಿರುವುದು ಅತ್ಯಂತ ಸಂತೋಷದ ವಿಷಯವಾಗಿದೆ. ಇದರಧ್ಯೇಯ–ಆಂತರಿಕ ಶಾಂತಿ, ಜಾಗತಿಕ ಸದ್ಭಾವನೆಯಾಗಿದೆ. ಪ್ರಸ್ತುತ ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಘರ್ಷಣೆ ಮತ್ತುಉದ್ವಿಗ್ನತೆ ಹೆಚ್ಚುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ ವಿಶ್ವಧ್ಯಾನದಿನದ ಮೂಲಕ ಪ್ರತಿಯೊಬ್ಬ ವ್ಯಕ್ತಿಯುಆತ್ಮವಲೋಕನ ಮಾಡಿಕೊಳ್ಳುತ್ತಾ ಆತ್ಮವಿಶ್ವಾಸ, ಮತ್ತುಆಂತ–ರಿಕ ಶಾಂತಿಯನ್ನುಪಡೆಯಲು ಪ್ರಯತ್ನ ಪಡಬೇಕಾಗಿದೆ. ಈ ಕಾರ್ಯಕ್ರಮವು ಮಾನವಜೀವನವನ್ನು ಹೆಚ್ಚು ಸಬಲಗೊಳಿಸಿ ಶಾಂತಿಮತ್ತು ಸದ್ಭಾವನೆಯನ್ನುಜಗತ್ತಿನಲ್ಲಿತರ'ಬಲ್ಲದು.ಇದು ಭಾರತದ ಪ್ರಾಚೀನತತ್ವವಾದ "ವಸುಧೈವಕುಟುಂಬಕಂ" ಭಾವನೆಯನ್ನು ವಿಶ್ವದಲ್ಲಿ ಜಾಗೃತಗೊಳಿಸಲಿದೆ.ಧ್ಯಾನವು ವ್ಯಕ್ತಿಯ ಮನಸ್ಸಿನ ತರಬೇತಿಅಥವಾಅ–ರಿವಿನ ಒಂದುಕ್ರಮವನ್ನುಉಂಟುಮಾಡುವ ವಿಧಾನವಾಗಿದೆ. ಧ್ಯಾನ ಎಂಬ ಪದವು ವಿವಿಧ ವಿಶಾಲ ಆಚರಣೆಗಳನ್ನು ಸೂಚಿಸುತ್ತದೆ. ಅದು ಕೆಲವು ತಂತ್ರಗಳನ್ನು ಒಳಗೊಂಡಿದ್ದು ಅವುಗಳು ವಿಶ್ರಾಂತಿ, ಆಂತರಿಕ ಶಕ್ತಿಯನ್ನು ಹೆಚ್ಚಿಸುತ್ತವೆ. ಇದರಿಂದ ಸಹಾನುಭೂತಿ, ಅಭಿವೃದ್ಧಿ, ಪ್ರೀತಿ, ತಾಳ್ಮೆ ಉದಾರತೆ ಮತ್ತುಕ್ಷಮೆಯಂತಹ ಸದ್ಗುಣಗಳು ವಿಕಾಸವಾಗುತ್ತವೆ. ಧ್ಯಾನ ಮನಸ್ಸಿನ ಏಕಾಗ್ರತೆಯಿಂದ ಮಾತ್ರ ಸಾಧ್ಯ.

ಸಾಮಾನ್ಯವಾಗಿ ಬೌದ್ಧ, ಕ್ರೈಸ್ತ, ಹಿಂದೂ, ಇಸ್ಲಾಂ ಧರ್ಮಗಳಲ್ಲಿ ಯೋಗಅಥವಾಧ್ಯಾನದಉಲ್ಲೇಖವಿದೆ. ಪತಂಜಲಿ ಮಹರ್ಷಿಗಳ ಅಷ್ಟಾಂಗ ಸೂತ್ರ, ವೇದಉಪನಿಷತ್ತುಗಳುಧ್ಯಾನದ ಬಗ್ಗೆ ಮಾಹಿತಿಯನ್ನು ನೀಡುತ್ತವೆ.

ವರ್ಷದಅತಿದೊಡ್ಡರಾತ್ರಿ ಮತ್ತುಕಡಿಮೆ ಹಗಲು ಇರುವ ದಿನವೆಂದರೆಡಿಸೆಂಬರ್ 21.ಜಾಗತಿಕವಾಗಿ ನಾವೆಲ್ಲರೂಧ್ಯಾನದಕಡೆಗೆ ಗಮನ ಹರಿಸಲುಇದುಸೂಕ್ತ ಸಮಯವಾಗಿದೆ.

ಎಲ್ಲಾ ವಿಜ್ಞಾನಗಳಿಗಿಂತ ಬಿ, ನ್ನವಾದ ಇನ್ನೊಂದು ವಿಜ್ಞಾನವಿದೆ. ಅದುವೇಧ್ಯಾನ–ಯೋಗವಿಜ್ಞಾನ. ಬ್ರಹ್ಮಾಕುಮಾರಿಈಶ್ವ–ರೀಯ ವಿಶ್ವವಿದ್ಯಾಲಯದಲ್ಲಿಇದನ್ನು ಪ್ರಾಯೋಗಿಕವಾಗಿ ಕಲಿಸಲಾಗುತ್ತದೆ. ಈ ಸಂಸ್ಥೆಯಅಂಗಸಂಸ್ಥೆಯಾದ 'ರಾಜಯೋಗ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನ'ವು ಯೋಗ–ವಿಜ್ಞಾನವನ್ನು ಪ್ರಚಾರ ಮತ್ತು ಪ್ರಸಾರ ಮಾಡುವಕಾರ್ಯದಲ್ಲಿ ನಿರತವಾಗಿದೆ. ಇಲ್ಲಿಧರ್ಮ, ಜಾತಿ, ಮತ, ವಯಸ್ಸು, ವರ್ಣ ಭೇದವಿಲ್ಲದೆ ಸರ್ವರಿಗೂಯೋಗ ಶಿಕ್ಷಣವನ್ನು ಉಚಿತವಾಗಿ ಕಲಿಸಲಾಗುತ್ತದೆ. ಈ ಯೋಗವಿಜ್ಞಾನವು ಮನಸ್ಸು, ಬುದ್ಧಿ, ಸಂಸ್ಕಾರ, ಸ್ವಭಾವ, ವ್ಯವಹಾರಚಾರಿತ್ರ್ಯ ಇತ್ಯಾದಿಗಳಿಗೆ ಸಂಬಂಧಿಸಿದೆ. ಇಲ್ಲಿಆತ್ಮ ಮತ್ತು ಪರಮಾತ್ಮನ ನಡುವೆ ಸರ್ವಪ್ರಕಾರದ ಸಂಬಂಧವು ಹೇಗೆ ಜೋಡಿಸಬೇಕುಎಂಬುದನ್ನು ತಿಳಿಸಲಾಗುತ್ತದೆ. ಈ ಸಂಬಂಧಗಳಲ್ಲಿ ತಂದೆ, ಶಿಕ್ಷಕ, ಗುರುವಿನ ಸಂಬಂಧಅತಿ ಮುಖ್ಯ. ಆತ್ಮನಾಗಿ ಪರಮಾತ್ಮನಜೊತೆ ಮನನ, ಚಿಂತನೆ, ಮಿಲನ ಮಾಡಿದಾಗಯೋಗಿಯು ಮಗ್ನಾವಸ್ಥೆಯನ್ನುತ'ಲುಪುತ್ತಾನೆ. ಸ್ವಯಂ ಪರಮಾತ್ಮನೇ ಕಲಿಸುವ ರಾಜಯೋಗವುಅತ್ಯಂತ ಸರಳ ಹಾಗೂ ಸಹಜ. ಇದರಲ್ಲಿ ಮಾನವನ ಪ್ರವೃತ್ತಿಗಳ ಪರಿವರ್ತನೆ ಮತ್ತು ಶುದ್ಧೀಕರಣವಾಗಿ ಅವನ ಆಹಾರ–ವ್ಯವಹಾರಗಳು ಸುಧಾರಣೆಗೊಂಡು ಸಂಸ್ಕಾರಗಳು ಸತೋಪ್ರಧಾನವಾಗುತ್ತವೆ. ಹಾಗಾಗಿ ಸಾಮಾನ್ಯ ಮಾನವನುದೇವ–ಮಾನವನಾಗುತ್ತಾನೆ. ಯೋಗವೆಂಬ ಈ ವಿಜ್ಞಾನವು ಮನುಷ್ಯನ ಉದ್ವೇಗಗಳನ್ನು ನಿಯಂತ್ರಿಸುತ್ತದೆ. ಅವನ ವಿಚಾರಗಳನ್ನು ವ್ಯವಸ್ಥಿತ ಹಾಗೂ ಸರಳಿತಗೊಳಿಸುತ್ತದೆ. ಈ ವಿಜ್ಞಾನದಿಂದ ವ್ಯಕ್ತಿಯ ಮಾನಸಿಕ ಏಕಾಗ್ರತಾ ಶಕ್ತಿಯು ಹೆಚ್ಚುತ್ತದೆ. ಅಪಾರ ಶಾಂತಿಯಅನುಭವಆಗುತ್ತದೆ. ಪರಮಾತ್ಮನ ದಿವ್ಯಗುಣಗಳಾದ ಶಾಂತಿ, ಪವಿತ್ರತೆ, ಆನಂದ, ದಯೆ, ಸುಖ, ಪ್ರೇಮಇತರೆ ದಿವ್ಯಗುಣಗಳ ಅನುಭವಆಗುತ್ತದೆ. ಅವನ ವರ್ತನೆಯಲ್ಲಿ ಪರಿವರ್ತನೆಯಾಗಿ ಮನಸ್ತಾಪ, ಈರ್ಷೆ–ದ್ವೇಷ, ಕ್ರೋಧಇತರೆ ವಿಕಾ–ರಿಗುಣಗಳು ದೂರವಾಗುತ್ತವೆ. ಅವನ ಮನಸ್ಸಿನಲ್ಲಿ ಉದ್ವೇಗಗಳ ಜ್ವಾಲಾಮುಖಿ ಸ್ಫೋಟಗೊಳ್ಳುವುದಿಲ್ಲ. ಮಾನಸಿಕ ಚಿಂತೆಇರುವುದಿಲ್ಲ. ಏಕರಸ ಸ್ಥಿತಿ ಅಥ–'ವಾಆನಂದದ ಸ್ಥಿತಿ ಅವನದಾಗಿರುತ್ತದೆ.

ಸಹಜರಾಜಯೋಗ(ಧ್ಯಾನ)ದಿಂದಾಗುವ ಆರೋಗ್ಯದ ಲಾಭಗಳು:

1) ಯೋಗಾವಸ್ಥೆಯಲ್ಲಿ ಶ್ವಾಸೋಚ್ಛ್ವಾಸ ನಿಧಾನವಾಗಿ ನಡೆಯುವುದ–ರಿಂದಯೋಗಿಯು ವಿಶ್ರಾಂತಿ ಹಾಗೂ ನೆಮ್ಮದಿಯಅನುಭವ ಪಡೆಯುವನು.

2) ಯೋಗಾವಸ್ಥೆಯಲ್ಲಿ ಹೃದಯದಲ್ಲಿರಕ್ತ ಸಂಚಾರ ನಿಯಮಿತವಾಗಿ ನಿರ್ದಿಷ್ಟವಾಗಿಕಡಿಮೆಯಾಗುವುದರಿಂದ ಹೃದಯಕ್ಕೆ ಸಾಕಷ್ಟು ವಿಶ್ರಾಂತಿದೊರೆಯುತ್ತದೆ.

3) ಯೋಗಾವಸ್ಥೆಯಲ್ಲಿಯೋಗಿಯ ಶರೀರದಲ್ಲಿ ಸಂಚರಿಸುವರಕ್ತದಲ್ಲಿ ಲ್ಯಾಕ್ಟಿಕ್ಆಮ್ಲದ ಅಂಶವು ಶೀಘ್ರವಾಗಿ ಕೆಳಮಟ್ಟಕ್ಕೆ ಬರುವುದರಿಂದ ಸಂಪೂರ್ಣ ಶಾಂತಿಯಅನುಭವವಾಗುವುದಲ್ಲದೇಎಲ್ಲಾ ಪ್ರಕಾರದಉದ್ವೇಗ ಹಾಗೂ ನಿರುತ್ಸಾಹದಿಂದ ಮುಕ್ತಿ ಲಭಿಸಿ, ನರಮಂಡಲಕ್ಕೆ ಶಕ್ತಿಯು ದೊರೆಯುವುದಲ್ಲದೇಯಾವುದೇರೀತಿಯ ನರಗಳಿಗೆ ಸಂಬಂಧಿಸಿದ ರೋಗವು ನಿವಾರಣೆಯಾಗುತ್ತದೆ.

4) ಯೋಗಾವಸ್ಥೆಯಲ್ಲಿ ಮಾನಸಿಕ ಉದ್ವೇಗದೂರವಾಗುವುದರಿಂದ ಮಾನವನತ್ವಚೆಯಲ್ಲಿಅಸಾಧಾರಣರೋಗ ನಿರೋಧಕಶಕ್ತಿಯು ಪ್ರಪುಲ್ಲಿತವಾಗುವುದ–ರಿಂದಯೋಗಿಯುಉಲ್ಲಾಸಭರಿತನಾಗುವನು.

5) ಹೃದಯವಿಕಾರ, ರಕ್ತದೊತ್ತಡ. ಮಾನಸಿಕ ಅಶಾಂತಿ, ಅರೆಹುಚ್ಚು, ಕ್ರೋಧ, ಕಾಮ, ಮಾನಸಿಕ ಭಯದಿಂದಉಂಟಾದ ರೋಗಗಳೂ ಸಹ ಯೋಗದಿಂದ ಓಡಿ ಹೋಗುತ್ತವೆ.

6) ಯೋಗ ವಿಜ್ಞಾನವು ಮನುಷ್ಯನ ಉದ್ವೇಗಗಳನ್ನು ನಿಯಂತ್ರಿಸಿ, ಅವನ ವಿಚಾರಗಳನ್ನು ವ್ಯವಸ್ಥಿತವಾಗಿಡುತ್ತದೆ.

7) ಯೋಗದ ಫಲವಾಗಿ ನಾವು ಗಹನ ಶಾಂತಿಯಅನುಭವ ಮಾಡುತ್ತೇವೆ. ರೋಗ ಪ್ರತಿರೋಧಕ ಶಕ್ತಿ ಹೆಚ್ಚಾಗುತ್ತದೆ.

8) ವೈಜ್ಞಾನಿಕವಾಗಿ ಹೇಳುವುದಾದರೆ ಯೋಗಿಯುಏಕರಸ ಮತ್ತುಅಂತರ್ಮುಖತೆ ಹಾಗೂ ಹರ್ಷಿತಮುಖತೆಯ ಸ್ಥಿತಿಯಲ್ಲಿ ಸದಾಕಾಲಕ್ಕೆಇರುವುದರಿಂದ ಅವನ ಮಾನಸಿಕ ಹಾಗೂ ಶಾರೀರಿಕ ಕ್ರಿಯೆಗಳಲ್ಲಿ ಅಸಾಧಾರಣ ಬದಲಾವಣೆಗಳಾಗಿ ನಿರೋಗಿ, ದೀರ್ಘಾಯುವಾಗಿತೃಪ್ತಿಮಯಜೀವನವನ್ನು ಪಡೆಯುವನು.

9) ದುಃಖ, ರೋಗ, ಅಧೈರ್ಯ, ಆಸೆ, ಕಾಮ, ಕ್ರೋಧ, ಲೋಭ, ಮೋಹ, ಅಹಂಕಾರಗಳಾದ ಎಲ್ಲಾ ಮನೋರೋಗಗಳನ್ನು ಶಾಶ್ವತವಾಗಿ ನಿರ್ಮೂಲನೆ ಮಾಡಿ, ಶುದ್ಧ ಸಂಕಲ್ಪದಿಂದ ಸದಾಇರಲುಅತಿ ಸುಲಭವಾದ ಏಕೈಕ ಮಾರ್ಗವೇ ಸಹಜರಾಜಯೋಗವಾಗಿದೆ.

10) ಯೋಗದಿಂದಯೋಗಿಯುಅತಿನಿದ್ದೆ, ಆಲಸ್ಯ, ಭಯ, ವ್ಯಕ್ತಿದ್ವೇಷ, ಜಾತಿ, ಮತ, ಲಿಂಗಭೇದ, ವಯೋಭೇದಗಳನ್ನು ನಿರ್ಮೂಲನೆ ಮಾಡಿ ಪ್ರೇಮ, ದಯೆ, ಕರುಣೆ, ಪವಿತ್ರತೆಯಿಂದಕೂಡಿ ಕಮಲಪುಷ್ಪದಂತೆ ಅನಾಸಕ್ತನಾಗಿ ಇರಬಲ್ಲನು.

ವಿಶ್ವಆರೋಗ್ಯ ಸಂಸ್ಥೆಯು 'ಸಂಪೂರ್ಣ ಶಾರೀರಿಕ, ಮಾನಸಿಕ, ಸಾಮಾಜಿ–ಕ, ಆರೋಗ್ಯವೇಆರೋಗ್ಯವೆಂದು ಸಾರಿದೆ. ಕೇವಲ ರೋಗಗಳಿಲ್ಲದಿರುವಿಕೆ ಪರಿಪೂರ್ಣಆರೋಗ್ಯವಲ್ಲ' ಎಂದು ವ್ಯಾಖ್ಯಾನಿಸಿದೆ. ಯೋಗದಿಂದಆರೋಗ್ಯ ಭಾಗ್ಯ ಪಡೆಯುವುದು ಸಹಜವಾಗಿದೆ. ಬ್ರಹ್ಮಾಕುಮಾರಿ ಸಂಸ್ಥೆಯುಅಂತರರಾಷ್ಟ್ರೀಯ ಮಟ್ಟದಲ್ಲಿಧ್ಯಾನಸಪ್ತಾಹದ ಅಂಗವಾಗಿ ಅನೇಕ ಕಾರ್ಯಯೋಜನೆಗಳನ್ನು ರೂಪಿಸಿದೆ. ಅದರಲ್ಲಿ ಮುಖ್ಯವಾಗಿಉಚಿತರಾಜಯೊಗ ಶಿಬಿರಗಳು ಸೇರಿವೆ.

ವಿಶ್ವಾಸ ಸೋಹೋನಿ,

ಮಧುಮೇಹಿಗಳು ಪ್ರತಿದಿನ 2 ಮುಷ್ಠಿ ಮಖಾನ ತಿನ್ನೋದು ಒಳ್ಳೆಯದು

ಮಖಾನವು ಒಂದು ಆರೋಗ್ಯಕರ ತಿನಿಸಾಗಿದೆ. ಇದನ್ನು ನೀವು ಹು–ರಿದು ತಿನ್ನಬಹುದು, ಮಸಾಲೆಯನ್ನು ಬೆರೆಸಿಯೂ ತಿನ್ನಬಹುದು. ಇದು ಮಧುಮೇಹಿಗಳಿಗೆ ಹೆಚ್ಚು ಪ್ರಯೋಜನಕಾರಿಯಾಗಿದೆ.

ಮಖಾನದ ಬಗ್ಗೆ ನೀವು ಕೇಳಿರಬಹುದು. ಇತ್ತೀಚಿನ ದಿನಗಳಲ್ಲಂತೂ ಇದು ಚಿರಪರಿಚಿತ ಆಹಾರವಾಗಿದೆ. ಇದನ್ನು ಕಮಲದ ಬೀಜ ಎಂದೂ ಕರೆಯುತ್ತಾರೆ. ಅದರಲ್ಲೂ ಡಯೆಟ್ ಅನುಸ–ರಿಸುವವರಂತೂ ಮಖಾನವನ್ನು ಹೆಚ್ಚಾಗಿ ಸೇವಿಸುತ್ತಾರೆ. ನಿಮಗೆ ಗೊತ್ತಾ ಮಖಾನ ಸೇವನೆ ಮಧುಮೇಹಿಗಳಿಗೆ ಒಳ್ಳೆಯದಂತೆ. ಮಧುಮೇಹ ಇರುವವರು ತಮ್ಮ ಆಹಾರದಲ್ಲಿ ಕಡಿಮೆ ಗ್ಲೈಸೆಮಿಕ್ ಇಂಡೆಕ್ಸ್, ಹೆಚ್ಚಿನ ಫೈಬರ್ ಭರಿತ ಆಹಾರವನ್ನು ಸೇವಿಸಬೇಕು. ಅಂತಹವರಿಗೆ ಮಖಾನ ತುಂಬಾನೇ ಒಳ್ಳೆಯದು.

ಮಖಾನದಲ್ಲಿರುವ ಪೋಷಕಾಂಶಗಳು

ಮಖಾನಾ ರುಚಿಕರವಾದ ತಿಂಡಿ ಮಾತ್ರವಲ್ಲದೆ ಪೌಷ್ಟಿಕಾಂಶದ ಶಕ್ತಿ ಕೇಂದ್ರವಾಗಿದೆ. ಈ ಬೀಜಗಳು ಕಡಿಮೆ ಕ್ಯಾಲೋರಿ ಮತ್ತು ಕೊಬ್ಬನ್ನು ಹೊಂದಿರುತ್ತವೆ, ಇದು ಮಧುಮೇಹ ಹೊಂದಿರುವ ವ್ಯಕ್ತಿಗಳಿಗೆ ಸೂಕ್ತವಾದ ಆಯ್ಕೆಯಾಗಿದೆ. ಅವು ಪ್ರೋಟೀನ್, ಫೈಬರ್, ಮೆಗ್ನೀಸಿಯಮ್, ಪೊಟ್ಯಾಸಿಯಮ್ ಮತ್ತು ರಂಜಕದಂತಹ ಅಗತ್ಯವಾದ ಪೋಷಕಾಂಶಗಳಲ್ಲಿ ಸಮೃದ್ಧವಾಗಿವೆ.

ಮಧುಮೇಹಿಗಳಿಗೆ ಉತ್ತಮ ಮಖಾನ

ಮಖಾನಾ ಒಣ ಹಣ್ಣು, ಇದು ಕಡಿಮೆ ಗ್ಲೈಸೆಮಿಕ್ ಸೂಚಿಯನ್ನು ಹೊಂದಿದೆ ಮತ್ತು ಫೈಬರ್‌ನಲ್ಲಿ ಸಮೃದ್ಧವಾಗಿದೆ. ಇದರಲ್ಲಿರುವ ಫೈಬರ್ ಸಕ್ಕರೆಯನ್ನು ಹೀರಿಕೊಳ್ಳಲು ಕೆಲಸ ಮಾಡುತ್ತದೆ ಮತ್ತು ಚಯಾಪಚಯ ದರವನ್ನು ಹೆಚ್ಚಿಸುವ ಮೂಲಕ ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ. ನೀವೂ ಮಧುಮೇಹಿಯಾಗಿದ್ದರೆ ಮಖಾನವನ್ನು ಸೇವಿಸುವುದು ಉತ್ತಮ. ಮಧುಮೇಹ ರೋಗಿಗಳು ಮಖಾನವನ್ನು ಯಾವಾಗ ಮತ್ತು ಎಷ್ಟು ಪ್ರಮಾಣದಲ್ಲಿ ಸೇವಿಸಬೇಕು ಎಂಬುವುದನ್ನು ತಿಳಿಯೋಣ.

ಮಧುಮೇಹಿಗಳಿಗೆ ಮಖಾನಾ ಹೇಗೆ ಸಹಕಾರಿ?

ಮಖಾನಾ ಕಡಿಮೆ ಗ್ಲೈಸೆಮಿಕ್ ಇಂಡೆಕ್ಸ್ ಹೊಂದಿರುವ ಒಣ ಹಣ್ಣು.

ಇದು ದೇಹದಲ್ಲಿನ ಶಕ್ತಿಯನ್ನು ಕ್ರಮೇಣ ಸಮತೋಲನಗೊಳಿಸುವ ಮೂಲಕ ಸಕ್ಕರೆಯ ಸ್ಪೈಕ್ ಅನ್ನು ತಡೆಯಲು ಸಹಾಯ ಮಾಡುತ್ತದೆ. ಇದರ ನಾರಿನಂಶವು ಸಕ್ಕರೆಯ ಚಯಾಪಚಯವನ್ನುವೇಗಗೊಳಿಸುತ್ತದೆ ಮತ್ತು ಹೆಚ್ಚುವರಿ ಸಕ್ಕರೆಯು ದೇಹದಲ್ಲಿ ಸಂಗ್ರಹವಾಗುವುದನ್ನು ಮತ್ತು ರಕ್ತಕ್ಕೆ ಸೇರುವುದನ್ನು ತಡೆಯುತ್ತದೆ.

ನಂತರ ಇದು ಮಧುಮೇಹದಲ್ಲಿ ಕರುಳಿನ ಚಲನೆಯನ್ನು ಸುಧಾ–ರಿಸುವ ಮೂಲಕ ಮಲಬದ್ಧತೆಯನ್ನು ತಡೆಯುತ್ತದೆ. ಮಖಾನಾವು ಮೆಗ್ನೀಸಿಯಮ್ನಲ್ಲಿ ಸಮೃದ್ಧವಾಗಿದೆ, ಆದ್ದರಿಂದ ಇದು ದೇಹದಲ್ಲಿ ಆಮ್ಲಜನಕ ಮತ್ತು ರಕ್ತದೊತ್ತಡವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ. ಇದು ಮಧುಮೇಹದಲ್ಲಿ ಹೃದ್ರೋಗದ

ಅಪಾಯವನ್ನು ಕಡಿಮೆ ಮಾಡುತ್ತದೆ.

ಸಕ್ಕರೆಯ ಏರಿಳಿತವನ್ನು ತಡೆಯುತ್ತದೆ

ಮಧುಮೇಹ ರೋಗಿಗಳಿಗೆ ಪ್ರೋಟೀನ್ ಅತ್ಯಗತ್ಯ ಪೋಷಕಾಂಶವಾಗಿದೆ ಏಕೆಂದರೆ ಇದು ಅಂಗಾಂಶಗಳನ್ನು ನಿರ್ಮಿಸಲು ಮತ್ತು ಸರಿಪಡಿಸಲು ಸಹಾಯ ಮಾಡುತ್ತದೆ. ಮಖಾನಾವು ಗಮನಾರ್ಹ ಪ್ರಮಾಣದ ಪ್ರೋಟೀನ್ ಅನ್ನು ಹೊಂದಿರುತ್ತದೆ, ಇದು ಹಸಿವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಮಖಾನಾದಂತಹ ಪ್ರೋಟೀನ್–ಭ–ರಿತ ಆಹಾರಗಳಿಂದ ಶಕ್ತಿಯ ನಿಧಾನ ಬಿಡುಗಡೆಯು ರಕ್ತದಲ್ಲಿನ ಸಕ್ಕರೆಯ ಏರಿಳಿತವನ್ನು ತಡೆಯುತ್ತದೆ.

ಮಧುಮೇಹಿಗಳು ಮಖಾನಾವನ್ನು ಯಾವಾಗ ಮತ್ತು ಎಷ್ಟು ತಿನ್ನಬೇಕು?

ಮಧುಮೇಹದಲ್ಲಿ ನೀವು ಮಖಾನಾವನ್ನು ಹಲವು ವಿಧಗಳಲ್ಲಿ ತಿನ್ನಬಹುದು. ಬೆಳಗಿನ ಉಪಾಹಾರದ ಸಮಯದಲ್ಲಿ ಅದನ್ನು ಹಾಲಿನಲ್ಲಿ ನೆನೆಸಿ ಅರ್ಧ ಗಂಟೆಯ ನಂತರ ತಿನ್ನುವುದು ಆರೋಗ್ಯಕರ ವಿಧಾನವಾಗಿದೆ. ಇದಲ್ಲದೆ, ನೀವು ಇದನ್ನು ಬೆಳಗಿನ ಉಪಾಹಾರವಾಗಿ ಸೇವಿಸಬಹುದು ಅಥವಾ ಮಧುಮೇಹಿಗಳು ಪ್ರತಿದಿನ 2 ರಿಂದ 3 ಹಿಡಿ ಅಂದರೆ ಸುಮಾರು 30 ಗ್ರಾಂಗಳಷ್ಟು ಮಖಾನಾವನ್ನು ಮಾತ್ರ ಸೇವಿಸಬೇಕು.

ಹೀಗೆ ಮಾಡುವುದರಿಂದ ಶುಗರ್ ಸ್ಪೈಕ್ ಅನ್ನು ತಡೆಗಟ್ಟಲು ಮತ್ತು ಮಧುಮೇಹವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಇದರ ಸೇವನೆಯು ಮಧುಮೇಹಿಗಳಲ್ಲಿ ಸಕ್ಕರೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಬೆಲ್ಲದ ಹಣ್ಣಿನಲ್ಲಿದೆ ಔಷಧೀಯ ಗುಣ

ಯಾವಕಾಲದಲ್ಲಾದರೂ ಎಲ್ಲಾ ಹಣ್ಣುಗಳು ಸಿಗುತ್ತವೆ ಆದರೆ ಈ ಬೇಲದ ಹಣ್ಣು ಮಾತ್ರ ಆಯಾ ಕಾಲಕ್ಕೆ ಮಾತ್ರ ಸಿಗುತ್ತದೆ. ಈ ಹಣ್ಣಿನಲ್ಲಿ ಹಲವಾರು ಔಷಧಿಗುಣಗಳು ಅಡಗಿವೆ. ಕಫ ನಿವಾರಣೆಗೆ ಬಾಯಿಂದತ ಬರುವ ದುರ್ವಾಸನೆ ತಡಗಟ್ಟಲು ವಸಡುಗಳ ತೊಂದರೆ ಇದ್ದವರು ಹಾಗೂ ಆಮಶಂಕೆ ಭೇಧಿಯ ನಿವಾರಣೆಗೆ ಹಣ್ಣಾದ ಬೇಲದ ಹಣ್ಣಿನಿಂದ ಮೂಲವ್ಯಾಧಿ ಹಾಗೂ ಸಕ್ಕರೆ ಖಾಯಿಲೆಯವರು ಬಳಸ ಬಹುದು.

ಬೇಲದ ಹಣ್ಣಿಗೆ ಸಮಪ್ರಮಾಣ ಕಲ್ಲುಸಕ್ಕರೆ ಬೆರೆಸಿ ಸೇವಿಸಿದರೆ ಕಫ ಕಡಿಮೆಯಾಗುತ್ತದೆ.

ಆಮಶಂಕೆ ಭೇದಿಯಾಗುತ್ತಿದ್ದರೆ ಬೀಜಗಳನ್ನು ತೆಗೆದ ಬೇಲದ ಕಾಯಿಯ ತಿರುಳನ್ನು ನುಣ್ಣಗೆ ರುಬ್ಬಿ ಸೇವಿಸಿದರೆ ಭೇದಿ ನಿಲ್ಲುತ್ತದೆ.

ಬೇಲದ ಎಳೆಗಳ ರಸಕ್ಕೆ ಸೈನದವ ಉಪ್ಪು ಮತ್ತು ಬಿಸಿ ನೀರನ್ನು ಸೇರಿಸಿ ಸೇವಿಸಿದರೆ ಅಸ್ತಮಾ ಕಡಿಮೆಯಾಗುತ್ತದೆ.

ಬಿಕ್ಕಳಿಕೆ ಸಮಸ್ಯೆಯಿಂದ ಬಳಲುತ್ತಿದ್ದರೆ ಬೇಲದ ಹಣ್ಣಿನ ರಸ ಮತ್ತು ನೆಲ್ಲಿಕಾಯಿ ರಸ ಸೇವಿಸಿ ದಿನಕ್ಕೆ 2 ಚಮಚ ಸೇವಿಸಿದರೆ ಬಿಕ್ಕಳಿಕೆ ನಿಲ್ಲುತ್ತದೆ

ಬೇಲದ ಹಣ್ಣಿನ ರಸಕ್ಕೆ ಒಣಶುಂಠಿ ಪುಡಿ ಮತ್ತು ಬೆಲ್ಲ ಸೇರಿಸಿ ಸೇವಿಸಿದರೆ ತಾಯಿಯ ಎದೆಹಾಲು ವೃದ್ಧಿಸುತ್ತದೆ. ಶರೀರವನ್ನು ತಂಪುಗೊಳಿಸಲು ಮತ್ತು ಬಾಯಿಯ ದುರ್ಗಂಧವನ್ನು ನಿವಾರಣೆ ಮಾಡಲು ಬೇಲದ ಹಣ್ಣಿನ ಪಾನಕವನ್ನು ಸೇವಿಸಬೇಕು.

ನಾಳೆ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯ ಬೆಳಗಾವಿಯ ಅಧಿವೇಶನ ಶತಮಾನೋತ್ಸವ ಸಂಭ್ರಮ

ಬೆಳಗಾವಿ:ಡಿಸೆಂಬರ್:19: ಬೆಂಗಳೂ–ರಿನ ಭಾಗವತರು ಸಾಂಸ್ಕೃತಿಕ ಸಂಘಟನೆ ಹಾಗೂ ರಂಗಸೃಷ್ಟಿ ಸಾಂಸ್ಕೃತಿಕ ಸಂಘಟನೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ " ಮಹಾತ್ಮಾ ಗಾಂಧೀ–ಜಿಯವರ ಅಧ್ಯಕ್ಷತೆಯ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ ಸಂಭ್ರಮ" ಕಾರ್ಯಕ್ರಮವು ನಗರದ ಕನ್ನಡ ಭವನದಲ್ಲಿ ಡಿ. 22 (ರವಿವಾರ) ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ವರೆಗೆ ನಡೆಯಲಿದೆ.

ಅಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್. ಕೆ.ಪಾಟೀಲ ಅವರು ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಸಚೇತಕರು, ಕೆ.ಎಲ್.ಇ ಸಂಸ್ಥೆಯ ನಿರ್ದೇಶಕರಾದ ಮಹಾಂತೇಶ ಕವಟಗಿಮಠ ಅವರು ಆಗಮಿಸಲಿದ್ದು, ಕಾರ್ಯಕ್ರಮ ಅಧ್ಯಕ್ಷತೆಯನ್ನು ನಿವೃತ್ತ ಅಧೀಕ್ಷಕ ಅಭಿಯಂತರಾದ ರಮೇಶ ಜಂಗಲ ಅವರು ವಹಿಸಲಿದ್ದು, ಕೆ.ರೇವಣ್ಣ ಉಪಸ್ಥಿತರಿರುವರು.

ಇಂದಿನಿಂದ 3 ದಿನಗಳ ಕಾಲತೋಟಗಾರಿಕೆ ಮೇಳ : 24 ಜಿಲ್ಲೆಯ ಫಲಶ್ರೇಷ್ಠ ರೈತರಿಗೆ ಸನ್ಮಾನ

ತೋಟಗಾರಿಕೆ ಮೇಳಕ್ಕೆ ಸಕಲ ಸಿದ್ದತೆ : ಡಾ.ವಿಷ್ಣುವರ್ಧನ

ಬಾಗಲಕೋಟೆ :ತೋಟಗಾರಿಕೆಉ-ದ್ಯಾನಗಿರಿಯ ಮುಖ್ಯಆವರಣದಲ್ಲಿಡಿಸೆಂಬರ 21ರಿಂದ 23ವರೆಗೆ ನಡೆಯಲಿರುವತೋಗಾ-ರಿಕೆ ಮೇಳಕ್ಕೆ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದುತೋವಿವಿಯ ಕುಲಪತಿಡಾ.ವಿಷ್ಣುವರ್ಧನ ಹೇಳಿದರು.

ತೋವಿವಿಯಆವರಣದಲ್ಲಿರುವರೈತ ಭವನದ ಲ್ಲಿಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದಅವರು ಈ ವರ್ಷ ಮೇಳದಲ್ಲಿ 100 ಸುಸಜ್ಜಿತ, 100 ಸಾಮಾನ್ಯ, 15 ಯಂತ್ರೋಪಕರಣಗಳ ಹಾಗೂ 15 ಆಹಾರ ಮಳಿಗೆಗಳನ್ನು ನಿರ್ಮಿಸಲಾಗಿದೆ. ತೋಟಗಾರಿಕೆಯಲ್ಲಿ ಬಳಸಬಹುದಾದ ವಿವಿಧ ಕೃಷಿ ಪರಿಕರಗಳಾದ ಬೀಜಗಳು, ಸಸಿಗಳು, ಕೀಟನಾಶಕಗಳು, ಗೊಬ್ಬರಗಳು, ಯಂತ್ರೋಪಕರಣಗಳ ಮಾರಾಟ ಹಾಗೂ ಪ್ರದರ್ಶನ ಮಾಡಲಾಗುತ್ತಿದೆಎಂದು ತಿಳಿಸಿದರು.

ಡಿಸೆಂಬರ 21 ರಂದು ಬೆಳಿಗ್ಗೆ 11 ಗಂಟೆಗೆಜರಗುವತೋಟಗಾರಿಕೆ ಮೇಳಕ್ಕೆ ಅಬಕಾರಿ ಹಾಗೂ ಜಿಲ್ಲಾಉಸ್ತುವಾರಿ ಸಚಿವಆರ್.ಬಿ.ತಿಮ್ಮಾಪೂರ ಚಾಲನೆ ನೀಡಲಿದ್ದು, ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಪಸ್ಥಿತರಿರುವರು. ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಟಿಡಿ-ಎಅಧ್ಯಕ್ಷಎಚ್.ವಾಯ್.ಮೇಟಿ ವಹಿಸಲಿದ್ದು,

ಜಿಲ್ಲೆಯಇತರೆ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆಗಣ್ಯಮಾನ್ಯರುಆಗ ಮಿಸಲಿದ್ದಾರೆ.ಮೊದಲ ದಿನ 24 ಜಿಲ್ಲೆಯ ಪೈಕಿ 8 ಶ್ರೇಷ್ಠ ತೋಟಗಾರಿಕೆರೈತರನ್ನು ಸನ್ಮಾನಿಸಲಾಗುತ್ತಿದೆ.ಇದರಜೊತೆಗೆ ಫಲಪುಷ್ಪ ಪ್ರದರ್ಶನ, ಮಳಿಗೆ, ವಿವಿಧ ಪ್ರಾತ್ಯಕ್ಷಿಕೆಗಳನ್ನು ಉದ್ಘಾಟನೆ, ಮಧ್ಯಾಹ್ನ ವಿಚಾರ ಗೋಷ್ಠಿಗಳು ಜರುಗಲಿವೆಎಂದರು.

ಎರಡನೇ ದಿನ ಡಿ.22 ರಂದು 8 ಜಿಲ್ಲೆಗಳ ಫಲಶ್ರೇಷ್ಠ ರೈತರನ್ನುಗೌರವಿಸಲಾಗುತ್ತಿದೆ. ಕಾರ್ಯಕ್ರಮಕ್ಕೆ ಬೃಹತ್, ಮದ್ಯಮಕೈಗಾ-ರಿಕಾ ಸಚಿವ ಎಂ.ಬಿ.ಪಾಟೀಲ, ಜವಳಿ, ಸಹಕಾರ, ಸಕ್ಕರೆ ಸಚಿವ ಶಿವಾನಂದ ಪಾಟೀಲ ಆಗಮಿಸಲಿದ್ದಾರೆ. ನಂತರತಾಂತ್ರಿಕಗೋಷ್ಠಿ ನಡೆಯಲಿವೆ. ಡಿ.23 ರಂದು ಮದ್ಯಾಹ್ನ 2 ಗಂಟೆಗೆರಾಷ್ಟ್ರೀಯರೈತ ದಿನಾಚರಣೆಆಚರಣೆಯೊಂದಿಗೆ 8 ಜಿಲ್ಲೆಯ ಫಲಶ್ರೇಷ್ಠ ರೈತರಿಗೆ ಸನ್ಮಾನ ಹಾಗೂ ಸಮಾರೋಪ ಸಮಾರಂಭಜರುಗಲಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಘನ ಉಪಸ್ಥಿತಿಯಲ್ಲಿ ನಡೆಯಲಿದೆ. ತೋಟಗಾರಿಕೆಸಚಿವರು, ಬಾಗಲಕೋಟೆ ಶಾಸಕ ಹಾಗೂ ಬಿಟಿಡಿಎಅಧ್ಯಕ್ಷರು ಸೇರಿದಂತೆಇತರೆಗಣ್ಯಮಾನ್ಯರುಆಗಮಿಸಲಿದ್ದಾರೆ-ಎಂದು ತಿಳಿಸಿದರು.

ಮೇಳದಲ್ಲಿ ವಿಶ್ವವಿದ್ಯಾಲಯ ಹಾಗೂ ಇನ್ನಿತರೆ ಸಂಸ್ಥೆಗಳಿಂದ ಅಭಿವೃದ್ದಿಪಡಿಸಲಾದ ತಳಿಗಳು ಹಾಗೂ ತಾಂತ್ರಿಕತೆಗಳ ಪ್ರಾತ್ಯಕ್ಷಿಕೆಗಳು, ರೈತ-ರಿಗಾಗಿತಾಂತ್ರಿಕ ಸಲಹಾ ಕೇಂದ್ರ ಹಾಗೂ ಶ್ವಾನ ಮತ್ತು ಮತ್ಸ್ಯಪ್ರದರ್ಶನಗಳನ್ನು ಏರ್ಪಡಿಸಲಾಗಿದೆ.ತೋಟಗಾರಿಕೆ ಬೆಳೆಗಳ ಉತ್ಪಾದಕತೆ ಮತ್ತುಗುಣಮಟ್ಟ ಹೆಚ್ಚಿಸುವಲ್ಲಿರೈತರುಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ನೀಡಲಾಗುತ್ತದೆ. ವಿಶೇಷವಾಗಿ ಕ್ಷೇತ್ರ ಪ್ರಾತ್ಯಕ್ಷಿಕೆಗಳು, ವಿಷಯಾಧಾರಿತ ಸಮುಚ್ಚಯಗಳು, ಒಳಾಂಗಣ ಪ್ರದರ್ಶನ, ವಿಶೇಷ ಮಾರಾಟ ಮಳಿಗೆಗಳನ್ನು ಒಂದೇ ಸೂರಿನಡಿಯಲ್ಲಿ ಪ್ರದರ್ಶನ ಹಾಗೂ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದೆ.ಮೇಳಕ್ಕೆ ಬರುವರೈತರು ಹಾಗೂ ಸಾರ್ವಜನಿಕರುಇದರ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

ಪ್ರಾರಂಭದಲ್ಲಿತೋವಿವಿಯಆವರಣದಲ್ಲಿ ಬೆಳೆದ ವಿವಿಧತರಹದ ಪುಷ್ಪ, ಹೊಸ ತಳಿಗಳ ತರಕಾರಿ ತಾಕುಗಳ ಪ್ರಾತ್ಯಕ್ಷಿಕೆಗಳನ್ನು ತೋ-ರಿಸಿದರು. ಪತ್ರಿಕಾಗೊಷ್ಠಿಯಲ್ಲಿತೋವಿವಿಯ ವಿಸ್ತರಣಾ ನಿರ್ದೇಶಕಡಾ.ಟಿ.ಬಿ.ಅಳ್ಳೊಳ್ಳಿ, ಶಿಕ್ಷನ ನಿರ್ದೇಶಕ ಡಾ.ಎನ್.ಕೆ.ಹೆಗಡೆ, ಸಂಶೋಧನಾ ನಿರ್ದೇಶಕಡಾ.ಬಿ.ಫಕ್ರುದ್ದಿನ, ಡೀನ್ ವಿದ್ಯಾರ್ಥಿಕಲ್ಯಾಣಡಾ.ರಾಮಚಂದ್ರ ನಾಯ್ಕ ಕೆ ಸೇರಿದಂತೆಇತರರು ಉಪಸ್ಥಿತ-ರಿದ್ದರು.

ಸಿದ್ಧೇಶ್ವರ ಶಾಲೆಯಲ್ಲಿ ಅಪರಾಧ ತಡೆ ಮಾಸಾಚರಣೆ

ವಿದ್ಯಾರ್ಥಿಗಳು ವ್ಯಸನಗಳಿಗೆ ಅಂಟಿಕೊಳ್ಳಬೇಡಿ-ಸಿಪಿಐ

ತೇರದಾಳ-ಇತ್ತಿಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಹೆಚ್ಚಾಗಿ ವ್ಯಸನಗಳಿಗೆ ಅಂಟಿಕೊಳ್ಳುತ್ತಿದ್ದಾರೆ. ಇದರಿಂದ ತಮ್ಮ ಭವಿಷ್ಯದ ಮೇಲೆ ಬರೆ ಎಳೆದುಕೊಳ್ಳುವ ಕೆಲಸ ಆಗುತ್ತಿದೆ. ಆದ್ದರಿಂದ ವಿದ್ಯಾರ್ಥಿಗಳು ವ್ಯಸನದಿಂದ ದೂರವಿರಿ ಎಂದು ಬನಹಟ್ಟಿ ಸಿಪಿಐ ಸಂಜೀವ ಬಳಗಾರ ಹೇಳಿದರು.

ಅಪರಾಧ ಮಾಸಾಚರಣೆ ನಿಮಿತ್ತ ಗುರುವಾರ ಇಲ್ಲಿನ ಸಿದ್ಧೇಶ್ವರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು.

18 ವರ್ಷದೊಳಿಗೆ ಮಕ್ಕಳು ಬೈಕ್‌ಗಳನ್ನು ಓಡಿಸಬಾರದು. ಆದರೆ ಪಾಲಕರೆ ಮಕ್ಕಳ ಕೈಯಲ್ಲಿ ಬೈಕ್‌ಗಳನ್ನು ನೀಡುವುದು ಕೊಡಿಸುವುದು ಮಾಡುತ್ತಿರುವುದು ನಿಜಕ್ಕೂ ನೋವಿನ ಸಂಗತಿಯಾಗಿದೆ. ಲೈಸೆನ್ಸ್ ಇಲ್ಲದೆ ಬೈಕ್‌ಗಳನ್ನು ಓಡಿಸುವುದು ಅಪರಾಧ. ಆದ್ದರಿಂದ ವಿದ್ಯಾರ್ಥಿಗಳಲ್ಲಿ ಕಾನೂನು ಅರಿವು ಅಗತ್ಯವಾಗಿದೆ ಎಂದು ಹೇಳಿದರು. ಠಾಣಾಧಿಕಾರಿ ಅಪ್ಪಣ್ಣ ಐಗಳಿ ಮಾತನಾಡಿ, ಅಪಘಾತ ಹಾಗೂ ಅಪರಾಧಗಳನ್ನು ಯುವಕರೆ ಹೆಚ್ಚಾಗಿ ಮಾಡುತ್ತಿರುವುದು ಇತ್ತಿಚೆಗೆ ಹೆಚ್ಚಳವಾಗಿದೆ. ದೇಶದ ಸಂಪತ್ತು ಆಗಿರುವ ಯುವಶಕ್ತಿ ಇಂತಹವುಗಳಿಂದ ದೂರ ಇರಬೇಕಾಗಿದೆ.

ಆ ದಿಸೆಯಲ್ಲಿ ಜಾಗೃತಿ ಹೊಂದಬೇಕೆಂದು ಹೇಳಿದರು. ಶಿಕ್ಷಕ ಬಿ.ಟಿ. ಪತ್ತಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರೌಢಶಾಲೆ ಮುಖ್ಯಗುರು ಡಿ.ಎ. ಉಗಾರ, ಪ್ರಾಥ-ಮಿಕ ವಿಭಾಗದ ಬಿ.ಜಿ. ಮುದಕನ್ನವರ, ಪೊಲೀಸ್ ಪೇದೆ ವಿವೇಕ ಸುವರ್ಣಖಂಡಿ, ಮಹಾಂತೇಶ ಗುರವ, ವಿಠ್ಠಲ ಮಾನೆ ಇದ್ದರು.

ಡಿ.24 ವರೆಗೆ ಶ್ರೀ ದ್ಯಾಮವ್ವದೇವಿ ಶ್ರೀ ಮಾಯಮ್ಮದೇವಿ ಜಾತ್ರೆ

ತಾಳಿಕೋಟೆ, ತಾಲೂಕಿನ ಸುಕ್ಷೇತ್ರ ಮಿಣಜಗಿ ಗ್ರಾಮದಲ್ಲಿ ಪ್ರತಿ 3ವರ್ಷಕ್ಕೊಮ್ಮೆ ಜರುಗುವ ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಹಾಗೂ ಶ್ರೀ ಮಾಯಮ್ಮದೇವಿ ಜಾತ್ರಾ ಮಹೋತ್ಸವವು ಡಿ. 24 ವರೆಗೆ ವಿಜೃಂಬಣೆಯಿಂದ ಜರುಗಲಿದೆ.

ಇಂದು ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಮೌಲಾಸಾಬ ಮಕಾನದಾರ ಹಾಗೂ ಶ್ರೀಮತಿ ಅವ್ವಮ್ಮ ಪೂಜಾರಿ ಇವರಿಂದ ಗೀ ಗೀ ಪದಗಳು ಜರುಗುವವು. ಸಂಜೆ 6 ಗಂಟೆಯಿಂದ ಮಿಣ-ಜಗಿಯ ಶ್ರೀ ಸಿದ್ದಲಿಂಗೇಶ್ವರ ಶಾಲಾ ಮಕ್ಕಳಿಂದ ಮನರಂಜನೆ ಕಾರ್ಯಕ್ರಮ ಜರುಗುವದು. ಅಂದೇ ರಾತ್ರಿ 9 ಗಂಟೆಯಿಂದ ಸಂಗೋಗಿ ಮಹಾರಾಜರು ಭೀಮಾಶಂಕರ ಗಾಯನ ಸಂಘ ಮತ್ತು ಉತ್ನಾಳ ಪರಶುರಾಮ ಮುಖ್ಯ ಗಾಯಕರು ಇವರಿಂದ ವಾದಿ-ಬೀದಿ ಗಾಯನ ಜರುಗುವದು.

ದಿ. 22 ರಂದು ಬೆಳಿಗ್ಗೆ 9 ರಿಂದ ಮದ್ಯಾಹ್ನ 2 ರವರೆಗೆ ಗೀ ಗೀ ಪದ ಹಾಗೂ 2 ಗಂಟೆಯಿಂದ 4 ಗಂಟೆಯವರೆಗೆ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾ ಜಾನಪದ ಉತ್ಸವ ಜರುಗುವದು. ಅಂದೇ ರಾತ್ರಿ 10 ಗಂಟೆಗೆ ಶ್ರೀ ರಾಘವೇಂದ್ರ ಮೆಲೋಡಿಸ್ ಇವರಿಂದ ಜ್ಯೂನಿಯರ್ ವಿಷ್ಣುವರ್ದನ್, ಜ್ಯೂನಿಯರ್ ರವಿಚಂದ್ರ ಇವ-ರಿಂದ ರಸ ಮಂಜರಿ ಕಾರ್ಯಕ್ರಮ ಜರುಗುವದು.

ರಾತ್ರಿ 11-30 ಗಂಟೆಗೆ ಪಗಡಿ ಪಂದ್ಯ ಜರುಗಲಿದ್ದು ಬಸವೇಶ್ವರ ಪಗಡಿ ಸಮಿತಿಯವ-ರಿಂದ 500001 ರೂ. ಪ್ರಥಮ ಭಹುಮಾನ, ಮಿಣಜಗಿ ಗ್ರಾಂಪಂ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಮಹಾಂತೇಶ ಬಿರಾದಾರ ಇವರಿಂದ 25001

ರೂ. ದ್ವಿತೀಯ ಭಹುಮಾನ, ಮಹಾಂತೇಶ ಹಾದಿಮನಿ ಇವರಿಂದ 15001ರೂ. ತೃತೀಯ ಭಹುಮಾನ, ಸಂಗಮೇಶ ಬಿರಾದಾರ 6001 ರೂ. ಚತುರ್ಥ ಭಹುಮಾನವನ್ನು ನೀಡಲಾಗುವದು. ದಿ.23 ರಂದು ಮದ್ಯಾಹ್ನ 2 ಗಂಟೆಯಿಂದ 6 ಗಂಟೆಯವರೆಗೆ ಕರ್ನಾಟಕ ಬಯಲಾಟ ಅಕಾಡೆಮಿ ಬಾಗಲಕೋಟ ವತಿಯಿಂದ ಬಯಲಾಟ ವಿಚಾರ ಸಂಕೀರ್ಣ ಪ್ರದರ್ಶನ ಜರುಗುವದು. ಅಂದೇ ರಾತ್ರಿ 9 ಗಂಟೆಗೆ ದಿ.ಸಂಗಣ್ಣ ಮಾದನಶೆಟ್ಟಿ ಸ್ಥಾಪಿತ ಶ್ರೀ ಬಸವೇಶ್ವರ ಬಯಲಾಟ ಸಂಘ ಬಸವನ ಬಾಗೇವಾಡಿ ಇವರಿಂದ ಶ್ರೀ ರೇಣುಕಾ ಯಲ್ಲಮ್ಮ ಮಹಾತ್ಮೆ ಪ್ರದರ್ಶನ ಜರುಗುವದು.

ದಿ.24 ರಂದು ಸಾಯಂಕಾಲ 4 ಗಂಟೆಗೆ ಡೊಳ್ಳು ಕುಣಿತದೊಂದಿಗೆ ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಹಾಗೂ ಶ್ರೀ ಮಾಯಮ್ಮದೇವಿಯ ಗರ್ಭಗುಡಿ ಪ್ರವೇಶ ಮಾಡುವರು. ಅಂದೇ ರಾತ್ರಿ 10 ಗಂಟೆಯಿಂದ ಶ್ರೀ ದೇವಿಯ ಮಹಾತ್ಮೆ ಬಯಲಾಟ ಜರುಗುವದೆಂದು ಶ್ರೀ ಗ್ರಾಮದೇವತೆ(ದ್ಯಾಮವ್ವದೇವಿ) ಹಾಗೂ ಶ್ರೀ ಮಾಯಮ್ಮದೇವಿ ಜಾತ್ರಾ ಮಹೋತ್ಸವ ಸಮಿತಿ ಪ್ರಕಟನೆ ಮೂಲಕ ತಿಳಿಸಿದೆ.

ಡಿ.23 ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ವಿಜಯಪುರ, 220ಕೆವಿ ನಂದಿಹಾಳ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ಕಾಮಗಾರಿ ಹಾಗೂ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. 220ಕೆವಿ ನಂದಿಹಾಳ ಮಾರ್ಗಗಳಲ್ಲಿ ಬರುವ 220ಕೆವಿ ಬಸವನ ಬಾಗೇವಾಡಿ ಮಾರ್ಗ-2, 220ಕೆವಿ ವಿಜಯಪುರ ಮಾರ್ಗ1 ಹಾಗೂ 2, 220ಕೆವಿ ವಿಜಯಪುರ ಉಪ-ಕೇಂದ್ರದಡಿ ಬರುವ 110ಕೆ.ವಿ ಉಪ ಕೇಂದ್ರಗಳಾದ ವಿಜಯಪುರ ನಗರ, ಭೂತನಾಳ, ಕೆ.ಐ.ಎ.ಡಿ.ಬಿ ವಿಜಯಪುರ, ಜುಮನಾಳ, 33ಕೆವಿ ಉಪ-ಕೇಂದ್ರಗಳಾದ ತಿಡಗುಂದಿ, ನಾಗಠಾಣ, ಹೊನ್ನುಟಗಿ, 33 ಕೆವಿ ಅರಕೇರಿ ಎಲ್.ಐ.ಎಸ್ ಮಾರ್ಗ, 220ಕೆ.ವಿ ವಿದ್ಯುತ್ ಕೇಂದ್ರ ಇಂಡಿ ಮೇಲೆ ಬರುವ 110ಕೆವಿ ಉಪ-ಕೇಂದ್ರಗಳಾದ ಇಂಡಿ, ಝಳಕಿ, ಹಿರೆಮಸಳಿ, ಇಂಚಗೇರಿ, ಜಿಗಜಿವಣಗಿ, ಕೆರೂರ, ಚಡಚಣ, ರೊಡಗಿ, ಧೂಳಖೇಡ, 33ಕೆವಿ ಉಪ-ಕೇಂದ್ರಗಳಾದ ನಾದ ಬಿಕೆ, ತಾಂಬಾ, ತಡವಲಗಾ, ಹಲಸಂಗಿ, ನೀವರಗಿ, ಹೋರ್ತಿ, ಬಿಎಎಸ್‌ಎಸ್‌ಕೆ ಸಕ್ಕರೆ ಕಾರ್ಖಾನೆ ಮರಗೂರ ಹಾಗೂ 220ಕೆ.ವಿ ವಿದ್ಯುತ್ ಕೇಂದ್ರ ಆಹೇರಿ ಮೇಲೆ ಬರುವ 110 ಕೆ.ವಿ ಉಪ-ಕೇಂದ್ರಗಳಾದ ಸಿಂದಗಿ, ಮಲಘಾಣ (ಸಿಂದಗಿ) ಮತ್ತು 33 ಕೆವಿ ಉಪ-ಕೇಂದ್ರಗಳಾದ ಗೋಲಗೇರಿ,ಕಲಕೇರಿ ವಿದ್ಯುತ್ ಉಪ ಕೇಂದ್ರಗಳಿಂದ ಸರಬರಾಜಾಗುವ ನಗರ,ಗ್ರಾಮೀಣ,ನೀರಾವರಿ ಪಂಪಸೆಟ್ ಹಾಗೂ ಕುಡಿಯುವ ನೀರಿನ ಘಟಕಗಳ ಮಾರ್ಗಗಳಲ್ಲಿ ಡಿಸೆಂಬರ್ 23ರ ಬೆಳಿಗ್ಗೆ 09 ರಿಂದ ಸಂಜೆ 05 ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಆದ್ದರಿಂದ, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಗ್ರಾಹಕರು ಸಹಕರಿಸುವಂತೆ ಹೆಸ್ಕಾಂನ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಮಹಾವಿದ್ಯಾಲಯದಲ್ಲಿ ಮಹಿಳಾ ಸಬಲೀಕರಣ ಕಾರ್ಯಕ್ರಮ



ಇಂಡಿ : ತಾಲೂಕಿನ ತಾಂಬಾ ಗ್ರಾಮದ ಶ್ರೀ ಎಸ್.ಆರ್.ಮಾಳಗೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ನಡೆದ ಮಹಿಳಾ ಸಬಲೀಕರಣ ಕಾರ್ಯಕ್ರಮವನ್ನು ಉಪನ್ಯಾಸಕಿ ಜಿ.ಬಿ.ಕನ್ನೂರ ಉದ್ಘಾಟಿಸುತ್ತಿರುವುದು.

ತಾಂಬಾ: ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದುತ್ತಿದ್ದಾರೆ. ಪುರುಷರ ಅಧೀನದಲ್ಲಿದ್ದ ಕಾಲಕ್ಕೂ ಇಂದಿನ ಕಾಲದ ವಾತಾವರಣಕ್ಕೂ ಸಾಕಷ್ಟು ವ್ಯತ್ಯಾಸಗಳಿವೆ. ಇಂದು ಸ್ತ್ರಿ ಸ್ವಾವಲಂಬಿಯಾಗಿ ಸ್ವತಂತ್ರವಾಗಿ ಎಲ್ಲಾ ಕ್ಷೇತ್ರದಲ್ಲಿ ಮುಂದೆ ಬರಲು ವಿದ್ಯಾರ್ಥಿನಿಯರಿಗೆ ಸಮಾಜದ ಮುಖ್ಯವಾಹಿನಿಗೆ ಮುಂದೆ ಬಂದು ಸಾಧನೆ ಮಾಡಲು ವಿದ್ಯಾರ್ಥಿನಿಯರಿಗೆ ಜೆಂಡರ್ ಸ್ಪೆಷಾಲಿಸ್ಟ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಶ್ರೀಮತಿ ಯಶೋಧ ಜೋಶಿ ಕರೆ ನೀಡಿದರು.

ಗ್ರಾಮದ ಶ್ರೀ ಎಸ್.ಆರ್.ಮಾಳಗೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ನಡೆದ ಮಹಿಳಾ ಸಬಲೀಕರಣ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಜೀವನವೆಂಬ ಜೋಕಾಲಿಯಲ್ಲಿ ಕಷ್ಟ-ಸುಖಗಳು ಸಹಜ ಎರಡನ್ನು ಸಮಾನವಾಗಿ ಸ್ವೀಕರಿಸಿ ಸಂಸಾರವೆಂಬ ಬಾಳಿನ ಬಂಡಿಂ-ಯನ್ನು ಯಶಸ್ವಿಯಾಗಿ ದಡ ಸೇರುವವಳೇ ನಿಜವಾದ ಮಹಿಳೆ. ಮಹಿಳೆಯರು ಕೇವಲ ಮನೆಗೆಲಸಕ್ಕೆ ಸೀಮಿತವಲ್ಲ, ಅವಳಲ್ಲು ಪ್ರತಿಭೆಗಳಿರುತ್ತವೆ. ಅವುಗಳನ್ನು ಸೂಕ್ತ ಸಮಯದಲ್ಲಿ ಹೊರ ಹಾಕುವಲ್ಲಿ ಪುರುಷರು ಮಹಿಳೆಯರಿಗೆ ಪ್ರೋತ್ಸಾಹಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಎಸ್.ಆರ್. ಮಾಳಗೆ ಕಾಲೇಜಿನ ಪ್ರಾಚಾರ್ಯ ಆರ್. ಎಸ್.ಬೋಳೆಗಾಂವ ಮಾತನಾಡಿ ಮಹಿಳೆಯರು ಕೌಟುಂಬಿಕ ಸರಕಾಗದೆ ಕುಟುಂಬ ಬೆಳವಣಿಗೆಯ ಜೊತೆಯಲ್ಲಿ ಉದ್ಯಮಿ ಯಾಗು, ಉದ್ಯೋಗ ನೀಡು, ಸೇವಾ ವಲಯದಲ್ಲೂ ಮಹಿಳೆಯ-ರಿಗೆ ಸಾಕಷ್ಟು ಅವಕಾಶಗಳಿವೆ ಸಾಮಾಜಿ-ಕವಾಗಿ ಪ್ರಬಲರಾಗಿ ಪ್ರೇರಣಾ ಶಕ್ತ ಆಗಲು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ ಬೆಳೆಯುವ-ಬೆಳೆಸುವ ಮನೋಧರ್ಮ ಬೆಳೆಸಿಕೊಳ್ಳಲು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಪ್ರೊ.ಎಸ್ ಐ ವಾಲಿಕಾರ ಪ್ರಸ್ತಾವಿಕವಾಗಿ ಮಾತನಾಡಿದರು.

ಸಂಸ್ಥೆಯ ಚೇರ್ಮನ್ ಆಯ್.ಬಿ.ಕಿಣಗಿ ಹಾಗೂ ಕಾರ್ಯದರ್ಶಿಗಳಾದ ಎ.ಬಿ.ಕುಲಕರ್ಣಿ ಜಂಟಿಯಾಗಿ ಉದ್ಘಾಟಿಸಿದರು. ಪ್ರೊ. ಎಸ್.ಕೆ.ಬಿರಾದರ, ಪ್ರೊ. ಎಸ್.ಎಮ್.ಬಿರಾದಾರ, ಪ್ರೊ. ಜಿ. ಎಚ್.ಮುಂಜಿ ಪ್ರೊ. ಎಸ್.ಜಿ.ಪಾಟೀಲ, ಬಿ.ಎಸ್.ಅವಟಿ, ಬಿ.ಓ.ಮೂಲಿಮನಿ, ಬಿ.ಎಸ್.ಪೂಜಾರಿ ಎಸ್.ಎಸ್.ಕನ್ನಾಳ, ಜಿ. ಎಸ್.ಐಹೊಳೆ, ಎಮ್.ಬಿ.ಅಂಗಡಿ, ಎಸ್. ಎಲ್.ಅಡವಿ, ಆರ್.ವಿ.ಆಳೋರ ಸೆರಿದಂತೆ ಮತ್ತಿತರರು ಇದ್ದರು.

ವಿದ್ಯಾರ್ಥಿನಿ ರೇಖಾ ಜಿಡ್ಡಿಮನಿ ಮತ್ತು ವಿಜಯಲಕ್ಷ್ಮೀ ಪ್ಯಾಟಿ ಅವರ ಪ್ರಾಥ-ರ್ಥನೆಯೊಂದಿಗೆ ಸಭೆ ಪ್ರಾರಂಭಗೊಂಡಿತು. ಪ್ರೊ.ಎಸ್.ಐ.ವಾಲಿಕರ ಸ್ವಾಗತಿಸಿದರು. ಶ್ರೀಮತಿ ಎ.ಎಮ್.ಸೋಮನಿಂಗ ನಿರೂಪಿಸಿದರು. ಡಾ. ಎಚ್.ಆರ್.ಹೊನ್ನಳ್ಳಿ ವಂದಿಸಿದರು

ಫೋಟೊ ಕ್ಯಾಪ್ಷನ್ 19 ಇಂಡಿ 01 : ತಾಲೂಕಿನ ತಾಂಬಾ ಗ್ರಾಮದ ಶ್ರೀ ಎಸ್. ಆರ್.ಮಾಳಗೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ನಡೆದ ಮಹಿಳಾ ಸಬಲೀಕರಣ ಕಾರ್ಯಕ್ರಮವನ್ನು ಉಪನ್ಯಾಸಕಿ ಜಿ.ಬಿ.ಕನ್ನೂರ ಉದ್ಘಾಟಿಸುತ್ತಿರುವುದು.

ಅಮಿತ್ ಶಾ ಹೇಳಿಕೆಗೆ ಜೈಭೀಮ ಮುತ್ತಗಿ ಖಂಡನೆ

ತಾಳಿಕೋಟೆ, ರಾಜ್ಯಸಭೆಯಲ್ಲಿ ಮಾತನಾಡುವ ವೇಳೆ ಗೃಹ ಸಚಿವ ಅಮಿತ್ ಶಾ ಅವರು ಅಂಬೇಡ್ಕರ್ ಎನ್ನುವುದು ಕೆಲವ-ರಿಗೆ ವ್ಯಸನವಾಗಿದೆ ಎಂದು ಹೇಳುವ ಮೂಲಕ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಅವಮಾನಿಸುವುದರ ಜೊತೆಗೆ ದೇಶದ ಸಂವಿಧಾನವನ್ನೂ ಅವಮಾನಿಸಿದ್ದಾರೆ ಇದನ್ನು ನಾವು ಉಗ್ರವಾಗಿ ಖಂಡಿಸುತ್ತೇವೆ ಎಂದು ದಲಿತ ಮುಖಂಡ ಹಾಗೂ ಕರ್ನಾಟಕ ರಕ್ಷಣಾ ವೇದಿಕೆ ಸಂಘಟನೆಯ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಜೈಭೀಮ ಮುತ್ತಗಿ ಹೇಳಿದ್ದಾರೆ. ಪ್ರಕಟನೆ ನೀಡಿರುವ ಅವರು ಅಂಬೇಡ್ಕರ

ರಕ್ತದಾನಕ್ಕೆ ಮುಂದಾದ ವಿದ್ಯಾರ್ಥಿನಿಯರು

ಕಾಲೇಜು ವಿದ್ಯಾರ್ಥಿಗಳಲ್ಲಿ ರಕ್ತದಾನದ ಜಾಗೃತಿ ಅಗತ್ಯ

ರಬಕವಿ–ಬನಹಟ್ಟಿ,ಡಿ19: ರಕ್ತದಾನ ಮತ್ತು ರಕ್ತದಾನದ ಮಹತ್ವದ ಕುರಿತು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮುಖ್ಯವಾಗಿದೆ ಎಂದು ರಬಕವಿ ಬನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಶಿವಾನಂದ ಹಂದಿಗುಂದ ತಿಳಿಸಿದರು.

ಅವರು ಗುರುವಾರ ಇಲ್ಲಿನ ಎಸ್ ಟಿ ಸಿ ಕಾಲೇಜಿನ ಹಳೇ ವಿದ್ಯಾರ್ಥಿಗಳ ಸಂಘದವರು ಹಮ್ಮಿಕೊಂಡ ಸ್ವಯಃ ಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕು. ರಕ್ತದಾನವೂ ಕೂಡಾ ಸಮಾಜ ಸೇವೆಯಾಗಿದೆ. ವಿದ್ಯಾರ್ಥಿಗಳು ತಾವು ರಕ್ತದಾನ ಮಾಡುವುದರೊಂದಿಗೆ ಇನ್ನೀತರರಿಗೂ ತಿಳಿಸಬೇಕು ಎಂದು ಹಂದಿಗುಂದ ತಿಳಿಸಿದರು.

ಜಮಖಂಡಿಯ ಜೀವನ ಬ್ಲಡ್ ಬ್ಯಾಂಕ್ ಅಧ್ಯಕ್ಷ ಡಾ.ರುದ್ರಸ್ವಾಮಿಮಠ ಮಾತನಾಡಿ, 18 ರಿಂದ 55 ವಯಸ್ಸಿನವರೆಗಿನ ಯಾವುದೆ ಸದೃಢವಾದ, 45 ಕೆ.ಜಿ. ತೂಕವಿರುವ ವ್ಯಕ್ತಿ ರಕ್ತದಾನ ಮಾಡಬಹುದಾಗಿದೆ. ವಿದ್ಯಾರ್ಥಿನಿಯರು ರಕ್ತದಾನ ಮಾಡಲು ಮುಂದಾಗಬೇಕು. ಮಾನವ ದೇಹದಲ್ಲಿ ಉತ್ಪತ್ತಿಯಾಗುವ ರಕ್ತವು ಬಹಮೂಲ್ಯವಾದ ವಸ್ತುವಾಗಿದೆ. ಒಂದು ಬಾರಿ ರಕ್ತದಾನ ಮಾಡುವುದ–ರಿಂದ ಮೂರು ವ್ಯಕ್ತಿಗಳಿಗೆ ನಾವು ಸಹಾಯ ಮಾಡಿದಂತಾಗುತ್ತದೆ ಎಂದು ತಿಳಿಸಿದರು.

ಆಡಳಿತ ಮಂಡಳಿಯ ಸದಸ್ಯ ವೀರಭದ್ರ ಕುಳ್ಳಿ, ಪ್ರಾಚಾರ್ಯ ಜಿ.ಆರ್. ಜುನ್ನಾಯ್ಕರ್, ವೆಂಕಟೇಶ ನಿಂಗಸಾನಿ ಮಾತನಾಡಿದರು. ಸಂಘದ ಅಧ್ಯಕ್ಷ ಬ್ರಿಜ್ಮೋಹನ ಚಿಂಡಕ ಅಧ್ಯಕ್ಷತೆ ವಹಿಸಿದ್ದರು. ಜೆಎಸ್–ಎಸ್ ಸಂಘದ ಕಾರ್ಯಾಧ್ಯಕ್ಷ ಬಸವಂತ ಜಾಡಗೌಡ, ಐಕ್ಯೂಎಸಿ ಸಂಯೋಜಕ ಪ್ರಕಾಶ ಕೆಂಗನಾಳ, ಕಾರ್ಯದರ್ಶಿ ಗೀತಾ ಸಜ್ಜನ ಇದ್ದರು.

ಶಂಕರ ಅರಬಳ್ಳಿ, ಚೇತನ ಡಾಗಾ, ಮಹಾದೇವ ಗುಟ್ಟಿ, ಶ್ವೇತಾ ಮಠದ, ಹೂಮಾಯೂನ್ ಮುಲ್ಲಾ, ವೀರೂಪಾಕ್ಷಯ್ಯ ಮಠದ, ಯುವ ರೆಡ್ ಕ್ರಾಸ್ ಸಂಯೋಜಕ ಎಸ್.ಬಿ.ಉಕ್ಕಲಿ, ಎನ್.ಎಸ್.ಎಸ್ ಅಧಿಕಾರಿ ರೇಶ್ಮಾ ಗಜಾಕೋಶ, ಐ.ಜಿ.ಫಣಿಬಂದ್ ಸೇರಿದಂತೆ ಅನೇಕರು ಇದ್ದರು.

****

ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆ

ದಲಿತ ಬಾಂಧವರಿಂದ ಪ್ರತಿಭಟನೆ- ಪ್ರತಿಕೃತಿ ದಹನ

ತೇರದಾಳ–ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ ಕೇಂದ್ರ ಸಚಿವ ಅಮಿತ್ ಶಾ ಅವರ ಹೇಳಿಕೆಯನ್ನು ಖಂಡಿಸಿ ಪಟ್ಟಣದಲ್ಲಿ ಶುಕ್ರವಾರ ದಲಿತ ಬಾಂಧವರು ತಕ್ಷಶಿಲಾ ಬುದ್ಧವಿಹಾರ ಇಂಟರ್‌ನ್ಯಾಷನಲ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಹಾಗೂ ಬೌದ್ಧ ಗುರುಗಳಾದ ಬೋಧಿಪ್ರಜ್ಞಾ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಬಸವೇಶ್ವರ ವೃತ್ತ ಬಳಿ ಮಾನವ ಸರಪಳಿ ನಿರ್ಮಿಸಿ ಕೇಂದ್ರ ಸಚಿವ ಅಮಿತ್ ಶಾ ಪ್ರತಿ–ಕೃತಿ ದಹನ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಬೋಧಿಪ್ರಜ್ಞಾ ಅವರು, ಅಂಬೇಡ್ಕರ್ ಅವರು ಸಂವಿಧಾನ ರಚನೆಯಿಂದಲೇ ನೀವು ಸಂಸತ್‌ನಲ್ಲಿ ಕುಳಿತಿದ್ದೀರಿ ಎಂಬುದು ಅರಿವು ಇರಬೇಕು. ಒಬ್ಬ ಶಿಕ್ಷಣವಂತರಾದ ನೀವು ಸಂವಿಧಾನ ಶಿಲ್ಪಿ ಬಗ್ಗೆ ಹಗುರವಾಗಿ ಮಾತನಾಡಿದ್ದನ್ನು ನಾವು ಬಲವಾಗಿ ಖಂಡಿಸುತ್ತೇವೆ. ಅಂಬೇಡ್ಕರ್ ಕೇವಲ ದಲಿತರಿಗಷ್ಟೇ ಸಿಮೀತಗೊಂಡ ವ್ಯಕ್ತಿ ಅಲ್ಲ. ಅವರೊಬ್ಬ ಶಕ್ತಿ ಆಗಿದ್ದಾರೆ. ಅಂಬೇಡ್ಕರ್ ಬಗ್ಗೆ ಯಾವುದೇ ಮಠಾಧೀಶರಾಗಲಿ ಎಂತಹ ಸಚಿವರೇ ಆಗಲಿ ಯಾರೇ ಆಗಲಿ ಹಗುರವಾಗಿ ಮಾತನಾಡಿದರೆ ಅವಹೇಳನಕಾ–ರಿಯಾಗಿ ಹೇಳಿಕೆ ನೀಡಿದರೆ ದೇಶದಲ್ಲಿ ಮೊತ್ತೊಮ್ಮೆ ಕೋರೆಗಾಂವ ಘಟನೆ ನಡೆದೀತು ಎಚ್ಚರಿಕೆ ಇರಲಿ ಎಂದು ಆಕ್ರೋಶದಿಂದ ಹೇಳಿದರು. ಮುಖಂಡ ಪಿ.ಎಸ್. ಮಾಸ್ತಿ ಮಾತನಾಡಿದರು. ಅಮಿತ್ ಶಾ ವಿರುದ್ಧ ಘೋಷನೆ ಹಾಗೂ ಅಂಬೇಡ್ಕರ್ ಪರ ಜಯ ಘೋಷನೆಗಳನ್ನು ಪ್ರತಿಭಟನಾಕಾರರು ಕೂಗಿದರು. ಪುರಸಭೆ ಮಾಜಿ ಅಧ್ಯಕ್ಷ ಹನಮಂತ ರೋಡನ್ನವರ, ಹಾಲಿ ಸದಸ್ಯ ಶೆಟ್ಟಪ್ಪ ಸುಣಗಾರ, ಮಾಜಿ ಸದಸ್ಯರಾದ ಗೌತಮ ರೋಡಕರ, ರಾಜೇಸಾಬ ನಗಾರ್ಜಿ, ದಯಾನಂದ ಕಾಳೆ. ಸಿದ್ದು ದೊಡಮನಿ, ಲಕ್ಷ್ಮಣ ಮಾಸ್ತಿ, ಸದಾಶಿವ ಸಿಂಗೆ, ಗೋಪಾಲ ಸಿಂಗೆ, ಸಂಜು ಹಾಡಕರ, ಮಂಜುನಾಥ ಸರಿಕರ ಮತ್ತಿತರಿದ್ದರು.

ಸಿಟಿ ರವಿಯವರನ್ನು ತಕ್ಷಣ ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶ

ಬೆಂಗಳೂರು: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧದ ಹೇಳಿಕೆ ವಿಚಾರದಲ್ಲಿ ಬಂಧನಕ್ಕೆ ಒಳಗಾಗಿರುವ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿಟಿ ರವಿಯನ್ನ ತಕ್ಷಣವೇ ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶ ಹೊರಡಿಸಿದೆ.

ಸಿಟಿ ರವಿ ವಿರುದ್ಧ ಎಫ್‌ಐಆರ್ ರದ್ದುಕೋರಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ತಕ್ಷಣ ಬಿಡುಗಡೆಗೆ ಮಧ್ಯಂತರ ಆದೇಶ ಹೊರಡಿಸಿದೆ. ಆದರೆ, ತನಿಖೆಗೆ ಸಹಕರಿಸಬೇಕೆಂದು ಷರತ್ತು ವಿಧಿಸಿ. ಜಾಮೀನಿಗಾಗಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆಯನ್ನು ಜನಪ್ರತಿನಿಧಿಗಳ ವಿಶೇಷ ಕೋರ್ಟ್ ನಾಳೆ(ಡಿಸೆಂಬರ್ 21) ಮುಂದೂಡಿತ್ತು. ಆದ್ರೆ, ಇದೀಗ ಹೈಕೋರ್ಟ್‌ನಲ್ಲಿ ಸಿಟಿ ರವಿಗೆ ಬಿಗ್ ರಿಲೀಫ್ ಸಿಕ್ಕಿದೆ. ವಾದ ಪ್ರತಿವಾದ ಹೇಗಿತ್ತು?

ಸಿಟಿ ರವಿ ಪರ ವಕೀಲ ಸಂದೇಶ್ ಚೌಟ ,ಆರೋಪಿ, ಫಿರ್ಯಾದಿ ಇಬ್ಬರೂ ಶಾಸಕರು. ವಿಧಾನ ಪರಿಷತ್ ನಲ್ಲಿ ಈ ರೀತಿಯಾಗಿರುವುದು ದುರದೃಷ್ಟಕರ ಎಂದು ಕೋರ್ಟ್ ಅಸಮಾಧಾನಗೊಂಡಿದೆ. ಆರೋಪಗಳಿಗೆ 7 ವರ್ಷಕ್ಕಿಂತ ಕಡಿಮೆ ಶಿಕ್ಷೆಯಿದೆ. 41 ಎ ಅಡಿ ನೋಟಿಸ್ ನೀಡಬೇಕಿತ್ತು. ಪೊಲೀಸರು ಬಂಧನಕ್ಕೆ ಕಾರಣಗಳನ್ನು ನೀಡಬೇಕಿತ್ತು. ಆದರೆ ಇದನ್ನು ನೀಡಿರುವ ಬಗ್ಗೆ ದಾಖಲೆಗಳನ್ನು ಒದಗಿಸಿಲ್ಲ. ಪೊಲೀಸರು ಹಲ್ಲೆ ನಡೆಸಿದ್ದರಿಂದ ಗಾಯಗಳಾಗಿವೆ ಎಂದು ಸಿಟಿ ರವಿ ವಕೀಲರು ವಾದಿಸಿದ್ದಾರೆ.

ಚಿಕಿತ್ಸೆಯ ವಿವರವನ್ನು ವೈದ್ಯಾಧಿಕಾರಿ ಸರಿಯಾಗಿ ನಮೂದಿಸಿಲ್ಲ. ಆದರೆ ಸ್ಕ್ಯಾನಿಂಗ್ ಮಾಡಿಸಿರುವುದಾಗಿ ವರದಿಯಿದೆ. ಏನನ್ನೂ ರೆಕಾರ್ಡ್ ಮಾಡಿಲ್ಲವೆಂದು ಸಭಾಪತಿ ಹೇಳಿಕೆ ನೀಡಿದ್ದಾರೆ ಆರೋಪಿ ಸಿಟಿ ರವಿಯನ್ನು ಬಂಧಿಸಲು ಹಲ್ಲೆ ನಡೆಸುವ ಅಗತ್ಯವಿರಲಿಲ್ಲ. ಕಾನೂನು ಕ್ರಮ ಪಾಲಿಸಿ ಕ್ರಮ ಕೈಗೊಳ್ಳಬಹುದಿತ್ತು. ವಿಧಾನಪರಿಷತ್ ಪ್ರತಿಪಕ್ಷದ ಶಾಸಕರಾಗಿದ್ದಾರೆ. ಹೀಗಾಗಿ ಪರಾರಿಯಾಗುವ ಸಾಧ್ಯತೆ ಇಲ್ಲ ಎಂದಿದ್ದಾರೆ.

ವಾದ, ಪ್ರತಿವಾದ ಆಲಿಸಿದ ಹೈಕೋರ್ಟ್, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರನ್ನು ಕೂಡಲೇ ಬಂಧನದಿಂದ ಬಿಡುಗಡೆ ಮಾಡುವಂತೆ ಆದೇಶ ಹೊರಡಿಸಿದೆ.

ಸದ್ಯ ಸಿ.ಟಿ ರವಿ ಅವರಿಗೆ ಮಧ್ಯಂತರ ರಿಲೀಫ್ ಸಿಕ್ಕಿದೆ. ಆದ್ರೆ, ಎಫ್‌ಐಆರ್ ರದ್ದು ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ಮುಂದೆ ನಡೆಯಲಿದೆ. ಇಬ್ಬರೂ ಜನಪ್ರತಿನಿಧಿಗಳಾದ ಸಿ.ಟಿ ರವಿ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್ ನಡೆಗೆ ಹೈಕೋರ್ಟ್ ಬೇಸರ ವ್ಯಕ್ತಪಡಿಸಿದೆ. ಇನ್ನು ಸಿಟಿ ರವಿ ಬಿಡುಗಡೆಗೆ ಹೈಕೋರ್ಟ್ ಆದೇಶ ನೀಡಿದ ಬೆನ್ನಲ್ಲೇ ಇತ್ತ ಚಿಕ್ಕಮಗಳೂರಿನ ಅವರ ನಿವಾಸದ ಬಳಿ ಸಂಭ್ರಮ ಮನೆ ಮಾಡಿದೆ. ಬಿಜೆಪಿ ಕಾರ್ಯಕರ್ತರು, ಮುಖಂಡರು ಸಿ.ಟಿ.ರವಿ ಮನೆ ಮುಂದೆ ಸಂಭ್ರಮಿಸಿದರು., ಸತ್ಯಕ್ಕೆ ಜಯ ಸಿಕ್ಕಿದೆ ಎಂದ ಸಿಟಿ ರವಿ

ಬಿಡುಗಡೆ ಆದೇಶದ ಬೆನ್ನಲ್ಲೇ ಮಾದ್ಯಮಕ್ಕೆ ಸಿಟಿ ರವಿ ಪ್ರತಿಕ್ರಿಯಿಸಿದ್ದು, ಹೈಕೋರ್ಟ್ ಆದೇಶದಿಂದ ಸತ್ಯಕ್ಕೆ ಜಯ ಸಿಕ್ಕಿದೆ. ರಾಜಕೀಯ, ಸೈದ್ಧಾಂತಿ–ಕವಾಗಿ ಟೀಕೆ ಮಾಡುತ್ತೇನೆ. ವೈಯಕ್ತಿಕವಾಗಿ ನಾನು ಎಂದೂ ಟೀಕೆ ಮಾಡಲ್ಲ. ನನ್ನ ಬಗ್ಗೆ ಚಿಕ್ಕಮಗಳೂ–ರಿನಲ್ಲಿ ಕೇಳಿ ತಿಳದುಕೊಳ್ಳಿ. ಡಿ.ಕೆ.ಶಿವಕುಮಾರ್ ಬಗ್ಗೆ ರಾಮನಗರದಲ್ಲಿ ಕೇಳಿ ತಿಳಿದುಕೊಳ್ಳಿ. ಬೆಳಗಾವಿಯಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಬಗ್ಗೆ ಕೇಳಿ ತಿಳಿದುಕೊಳ್ಳಿ. ನಾನು ದೂರು ಕೊಟ್ಟರೂ ಎಫ್‌ಐಆರ್ ದಾಖಲಿಸಿಕೊಳ್ಳುತ್ತಿಲ್ಲ. ನನ್ನ ಮೇಲೆ ಸಾಕ್ಷಿ ಇಲ್ಲದಿದ್ರೂ ಎಫ್‌ಐಆರ್ ದಾಖಲಿಸುತ್ತಾರೆ. ನೇರವಾಗಿ ನಾನು ಬೆಂಗಳೂರಿಗೆ ಬರುತ್ತೇನೆ ಎಂದರು.

ಬಿಎಡ್-ದಾನಿಗೊಂಡ ಕಾಲೇಜ್ ಉತ್ತಮ ಸಾಧನೆ

ತೇರದಾಳ–ರಾಣಿ ಚನ್ನಮ್ಮ ವಿಶ್ವ ವಿದ್ಯಾಲದ ಶಿಕ್ಷಣ ಮಹಾವಿದ್ಯಾಲಯಗಳ ನಾಲ್ಕನೇ ಸೆಮಿಸ್ಟರಿ ಫಲಿತಾಂಶ ಪ್ರಕಟಗೊಂಡಿದ್ದು, ಸ್ಥಳೀಯ ದಾನಿಗೊಂಡ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಒಟ್ಟು 99 ಪ್ರಶಿಕ್ಷಣಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಎಲ್ಲರೂ ಉತ್ತೀರ್ಣರಾಗಿದ್ದಾರೆ. ಇವರಲ್ಲಿ ವಾಣಿಶ್ರೀ ಕೋನೆ ರಹೀನಾ ತೇರದಾಳ ಪ್ರಥಮ ಸ್ಥಾನ ಪಡೆದಿದ್ದಾರೆ. ನಸ್ರತ್‌ಬೇಗಂ ಮುಲ್ಲಾ ದ್ವಿತೀಯ ಹಾಗೂ ಮೀನಾಕ್ಷಿ ಕುಂಬಾರ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆಂದು ಪ್ರಾಚಾರ್ಯ ಡಾ. ಎಂ.ಆರ್. ಪಾಟೀಲ ತಿಳಿಸಿದ್ದಾರೆ.

ಇಂದು ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ

ಬೆಳಗಾವಿ ಕೆಇಆರ್‌ಸಿ ಹಾಗೂ ಹೆಸ್ಕಾಂ ನಿಗಮ ಕಚೇರಿಯರವರ ನಿರ್ದೇಶನಗಳ ಮೇರೆಗೆ ಕಾರ್ಯ ಮತ್ತು ಪಾಲನಾ, ನಗರ ಉಪವಿಭಾಗ–03, ಹುವಿಸಕಂನಿ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ಅಧ್ಯಕ್ಷತೆಯಲ್ಲಿ ಡಿಸೆಂಬರ್ 21 ರಂದು ಬೆಳಗ್ಗೆ 10.30 ಗಂಟೆಗೆ ಕಾರ್ಯ ಮತ್ತು ಪಾಲನಾ, ನಗರ ಉಪ ವಿಭಾಗ–03 ರ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆಯನ್ನು ಏರ್ಪಡಿಸಲಾಗಿದೆ. ವಿದ್ಯುತ್ ಗ್ರಾಹಕರು ತಮ್ಮ ಸಮಸ್ಯೆ ಅಥ–ವಾ ಕುಂದು ಕೊರತೆಗಳನ್ನು ಸಭೆಯಲ್ಲಿ ಭಾಗವಹಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಸಹಾಯಕ ಕಾರ್ಯನಿವಾಹಕ ಇಂಜಿನೀಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಣಕ ವಿಜ್ಞಾನ ವಿಭಾಗದಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಬೆಳಗಾವಿ : ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ನಾತಕೋತ್ತರ ಗಣಕ ವಿಜ್ಞಾನ ವಿಭಾಗವು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೀಟ್ ಹಂಚಿಕೆಯ ನಂತರ ಮುಖ್ಯ ಆವರಣ ಹಾಗೂ ವಿಜಯಪುರ ಸ್ನಾತಕೋತ್ತರ ಕೇಂದ್ರದಲ್ಲಿ ಖಾಲಿ ಉಳಿದಿರುವ ಎಂಸಿಎ ಕೋರ್ಸ್‌ನ ಸರ್ಕಾರಿ ಕೋಟಾದಡಿಯಲ್ಲಿ ಸೀಟ್‌ಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾಲಯದ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಡಿ.26 ರಂದು ಆಯಾ ಕೇಂದ್ರದಲ್ಲಿ ನಡೆಸಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಗಗಅಒಖ ತಂತ್ರಾಂಶದಲ್ಲಿ ಡಿ.19 ರಿಂದ 23 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಸಂಪೂರ್ಣವಾಗಿ ಭರ್ತಿಮಾಡಿದ ಅರ್ಜಿಯೊಂದಿಗೆ ನಿಗದಿತ ಶುಲ್ಕ ಭರಿಸಿ, ಧೃಡಿಕೃತ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಡಿ.24 ರ ಸಂಜೆ 5 ಗಂಟೆಯೊಳಗಾಗಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಗಣಕ ವಿಜ್ಞಾನ ವಿಭಾಗಗಳಲ್ಲಿ ಸಲ್ಲಿಸಲು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಜಾಲತಾಣ www.rcub.ac.in ಗೆ ಭೇಟಿ ನೀಡಲು ಅಥವಾ ದೂರವಾಣಿ: 0831–2565244 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.26 ರಂದು ಕಂದಾಯ ಉಪವಿಭಾಗ ಮಟ್ಟದ ಉಸ್ತುವಾರಿ ಸಮಿತಿ ಸಭೆ

ಬೆಳಗಾವಿ : ಮ್ಯಾನುವೆಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇಧ ಮತ್ತು ಅದರ ಪುನರ್ವಸತಿ ಅಧಿನಿಯಮ 2013 ರನ್ವಯ ಬೆಳಗಾವಿ ಕಂದಾಯ ಉಪವಿಭಾಗ ಮಟ್ಟದ ಉಸ್ತುವಾರಿ ಸಮಿತಿ ಸಭೆಯನ್ನು ಡಿ.26 ರಂದು ಬೆಳಗ್ಗೆ 11.30 ಗಂಟೆಗೆ ಉಪವಿಭಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಚೇ–ರಿಯ ಸಭಾಂಗಣದಲ್ಲಿ ಜರುಗಲಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಉಪವಿಭಾಗ ಮಟ್ಟದ ಜಾಗೃತಿ ಉಸ್ತುವಾರಿ ಸಮಿತಿಯ ಸದಸ್ಯಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಂತುಹುಳ ನಿವಾರಣಾ ಕಾರ್ಯಕ್ರಮ

ಸಿಂದಗಿ: ಡಬ್ಲ್ಯೂ.ಐ.ಎಫ್.ಎಸ್ ಹಾಗೂ ಜಂತುಹುಳ ನಿವಾರಣಾ ಕಾರ್ಯಕ್ರಮ ಬಾಲ್ಯಾವಸ್ಥೆಯಿಂದ ವಯಸ್ಕರ ಹಂತಕ್ಕೆ ಹೋಗುವ ಮದ್ಯಕಾಲವೇ "ಹದಿಹರೆಯ" ಕಾಲ. ಜೀವನದಲ್ಲಿ ಇದೊಂದು ಮಹತ್ತರವಾದ ಘಟ್ಟ ಅಥವಾ ಎರಡನೇ ಹಂತ ಎಂದು ತಾಲೂಕು ವೈದ್ಯಾಧಿಕಾರಿ ಡಾ.ಎ.ಎ.ಮಾಗಿ ಹೇಳಿದರು.

ಸಿಂದಗಿ ಪಟ್ಟಣದ ಸರಕಾರಿ ಹೆಣ್ಣುಮಕ್ಕಳ ಶಾಲೆಯ ಆವರಣದಲ್ಲಿ ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಸಹಯೊಗದೊಂದಿಗೆ ಹಮ್ಮಿಕೊಂಡ ಹದಿಹರೆಯದವರಿಗೆ ಕಬ್ಬಿಣಾಂಶದ ಮಾತ್ರೆ ನೀಡುವ ಕಾರ್ಯಕ್ರಮದಲ್ಲಿ ಮಾತ್ರೆ ನುಂಗಿಸಿ ಮಾತನಾಡಿದ ಅವರು, ತೀರ್ವವಾಗಿ ಬೆಳವಣಿಗೆ ಹೊಂದುವ ಈ ಸಂಧಿಕಾಲದಲ್ಲಿ ಹಾರ್ಮೋನುಗಳ ಬದಲಾವಣೆಗಳಿಂದ ದೈಹಿಕ ಹಾಗೂ ಮಾನಸಿಕ ಬದಲಾವಣೆಗಳು ಆಗುತ್ತವೆ. ಈ ವಯಸ್ಸಿನಲ್ಲಿ ಪೌಷ್ಠಿಕಾಂಶದ ಅವಶ್ಯಕತೆ ಹೆಚ್ಚಾಗಿರುತ್ತದೆ. ಅದರಲ್ಲೂ ಕಬ್ಬಿಣಾಂಶದ ಕೊರತೆ ಮುಖ್ಯ ಕಾರಣವಾಗಿರುತ್ತದೆ. ಆದ್ದರಿಂದ ಎಲ್ಲಾ ಶಾಲೆಗಳಲ್ಲಿ ಮತ್ತು ಅಂಗನವಾಡಿಗಳಲ್ಲಿರುವ ಮಕ್ಕಳಿಗೆ ಪ್ರತಿ ಸೋಮವಾರ ಕಬ್ಬಿಣಾಂಶದ ಮಾತ್ರೆಯನ್ನು ಬಿಸಿಯೂಟದ ನಂತರ ಮಕ್ಕಳಿಗೆ ನೀಡಬೇಕು ಎಂದರು.

ಈ ವೇಳೆ ತಾಲೂಕು ಆರೋಗ್ಯ ಕ್ಷೇತ್ರದ ಶಿಕ್ಷಣಾಧಿಕಾರಿ ಎಸ್.ಡಿ.ಕುಲಕರ್ಣಿ ಮಾತನಾಡಿ, 10–19 ವಯಸ್ಸಿನ ಹದಿಹರೆಯವದರಲ್ಲಿ ರಕ್ತ ಹೀನತೆ ಮತ್ತು ತೀವ್ರತೆ ಕಡಿಮೆ ಮಾಡುವುದಕ್ಕಾಗಿ ಕಬ್ಬಿಣಾಂಶ ಮಾತ್ರೆ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂಗನವಾಡಿ ಹಾಗೂ ಶಾಲೆಗಳಲ್ಲಿರುವ ಮಕ್ಕಳ ವಯಸ್ಸಿನ ಅನುಗುಣವಾಗಿ ಮಾತ್ರೆ ನೀಡಲಾಗುವುದು. ಹಾಗೆಯೇ ಪ್ರತಿ ಆರು ತಿಂಗಳಿಗೊಮ್ಮೆ ಜಂತುಹುಳ ನಿವಾರಣೆಗಾಗಿ ಅಲ್ಬೆಂಡೆಜೋಲ್ ಮಾತ್ರೆ ಕೊಡಲಾಗುವುದು. ಇದರಿಂದ ಮಕ್ಕಳಲ್ಲಿ ಅಪೌಷ್ಠಿಕತೆ ಹೋಗಲಾಡಿಸಿ, ಮಕ್ಕಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಸಹಾಯಕಾರಿಯಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಶರಣಬಸು ಲಂಗೋಟಿ, ಸಹಶಿಕ್ಷಕರಾದ ಎಮ್.ಎಮ್.ಆಳಂದ, ಎಸ್.ಜಿ.ಕಟಕದೊಂಡ, ಎ.ಕೆ.ಬಿರಾದಾರ, ಆರೋಗ್ಯ ಇಲಾಖೆಯ ವಿರೇಂದ್ರ ಪವಾಡೆ, ಮಹಾಲಿಂಗ ಫಕೀರಪೂರ, ಆಶಾ ಮೆಂಟ–ರ್ ಸರೋಜಿನಿ ಪತ್ತಾರ, ಆಶಾಕೌಸರ ಸೇ–ರಿದಂತೆ ಆಸ್ಪತ್ರೆಯ ಸಿಬ್ಬಂದಿಗಳು ಶಾಲೆಯ ಶಿಕ್ಷಕರು ಉಪಸ್ಥಿತರಿದ್ದರು.

****

ಇಂದಿನ ಯುವ ಪೀಳಿಗೆಗೆ ಜಾನಪದದ ಅರಿವು ಮೂಡಿಸುವುದು ತುಂಬಾ ಅವಶ್ಯಕ